# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 74 | ಆರ್‌ಎನ್‌ಐ ನಂ: ಕೆಎಆರ್‌ಕೆಎನ್/2023/88462 | ಚಿತ್ರದುರ್ಗ | ದಿನಾಂಕ: 03-10-2024 ಗುರುವಾರ | ಪುಟ: 4 | ಬೆಲೆ : ರೂ.2-00
Volume - 02 Issue - 74 | RNI No: KARKAN/2023/88462 | Chitradurga | Date: 03-10-2024 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಗಾಂಧಿ ತತ್ವಗಳು ಇಂದಿಗೂ ಪ್ರಸ್ತುತ: ರಾಜೇಶ್ವರಿ ಹೆಗಡೆ 2

ಭದ್ರಾಗೆ ಒಂದುವರೆ ತಿಂಗಳಲ್ಲಿ ಕೇಂದ್ರದ ಅನುದಾನ 3

ನೇರ ರೈಲ್ವೆ: 2027ರ ಜನವರಿಯೊಳಗೆ ಲೋಕಾರ್ಪಣೆ: ಸಚಿವ ಸೋಮಣ್ಣ 4



ಸುದ್ದಿ, ಜಾಹೀರಾತಿಗೆ 9686622252


## ಫಾಸ್ಟ್ ನ್ಯೂಸ್

### ಸಿದ್ದರಾಮಯ್ಯ ಅವರು ಆತ್ಮಸಾಕ್ಷಿ ಇದ್ದರೆ ರಾಜೀನಾಮೆ ನೀಡಲಿ: ಸಚಿವ ಸೋಮಣ್ಣ

» ಚಿತ್ರದುರ್ಗ



ಸಿದ್ದರಾಮಯ್ಯ ಅವರು ಆತ್ಮಸಾಕ್ಷಿ ಇದ್ದರೆ ರಾಜೀನಾಮೆ ನೀಡಲಿ ಎಂದು ಕೇಂದ್ರ ಸಚಿವ ವಿ ಸೋಮಣ್ಣ ಹೇಳಿದ್ದಾರೆ. ಚಿತ್ರದುರ್ಗದ ಪ್ರವಾಸಿ ಮಂದಿರದಲ್ಲಿ ಅವರು ಮಾತನಾಡಿದ್ದು ನಾವು ಯಾರು ಕೂಡ ಅವರ ಕೈ ಹಿಡಿದಿಲ್ಲ. ಒಂದು ತಪ್ಪು ಮಾಡಲು ಹೋಗಿ ಹತ್ತು ತಪ್ಪು ಮಾಡುತ್ತಿದ್ದಾರೆ. ತಮ್ಮ ಕಾಲ ಮೇಲೆ ತಾವೆ ಕಲ್ಲು ಹಾಕಿಕೊಂಡು ಗಾಯ ಮಾಡಿಕೊಂಡಿದ್ದಾಗಿ ನಾನು ಈ ಹಿಂದೆ ಹೇಳಿದ್ದೆ. ಕಾನೂನಿಗಿಂತ ದೊಡ್ಡವರು ನಾವಲ್ಲ, ಅವರ ಬಗ್ಗೆ ತುಂಬಾ ಗೌರವ ಇದ್ದು ಮುಖ್ಯಮಂತ್ರಿ ಆಗಿ ಮಾತನಾಡುವುದು ಸರಿಯಲ್ಲ. ದಯಮಾಡಿ ಅವರು ರಾಜೀನಾಮೆ ಕೊಟ್ಟು ಕ್ಲೀನ್ ಚಿಟ್ ಪಡೆದು ಮತ್ತೆ ಮುಖ್ಯಮಂತ್ರಿ ಆಗಲಿ. ನಮ್ಮೆಲ್ಲರಿಗೂ ಕೂಡ ಆತ್ಮಸಾಕ್ಷಿಗಿಂತ ನೈತಿಕತೆ ದೊಡ್ಡದಾಗಿದ್ದು ಸಿದ್ದರಾಮಯ್ಯ ಅವರು ರಾಜೀನಾಮೆ ಕೊಟ್ಟು ಕ್ಲೀನ್ ಚಿಟ್ ಪಡೆದು ಪುನಃ ಮುಖ್ಯಮಂತ್ರಿಯಾಗಲಿ ಎಂದು ವಿ ಸೋಮಣ್ಣ ಹೇಳಿದ್ದಾರೆ. ಭದ್ರಾ ಮೇಲ್ದಂಡೆ ಯೋಜನೆಗೆ ಶೀಘ್ರ ಅನುದಾನ ಬಿಡುಗಡೆ 5300ಕೋಟಿ ಅನುದಾನ ಬಿಡುಗಡೆಗೆ ಸೂಕ್ತ ಕ್ರಮ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಭೇಟಿ ಮಾಡಿದ್ದೇವೆ ಎಂದು ಸಚಿವ ಸೋಮಣ್ಣ ತಿಳಿಸಿದರು. ಬಿಜೆಪಿ ಸಂಸದಗೋವಿಂದಕಾರಜೋಳಮಾತನಾಡಿ,ಸಿಎಂ ಆತ್ಮಸಾಕ್ಷಿಗೆ ಅನುಗುಣ ನಡೆಯುವ ಹೇಳಿಕೆಗೆ ಟಾಂಗ್ ನೀಡಿ ನಿಮ್ಮದಲ್ಲದ ಸೈಟ್‌ಗೆ ಪರಿಹಾರ ಕೇಳೋದು ಆತ್ಮಸಾಕ್ಷಿಯಾ? ಬೇನಾಮಿ ಆಸ್ತಿ ಪಡೆದುಕೊಳ್ಳುವುದು ಆತ್ಮಸಾಕ್ಷಿಯಾ? ಕೋರ್ಟ್ ಆದೇಶ ಆದ ದಿನವೇ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಬೇಕಿತ್ತುಈಗಲೂ ಕಾಲ ಮಿಂಚಿಲ್ಲ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಲಿಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಿ ತನಿಖೆ ಎದುರಿಸಲಿ ಕ್ಲೀನ್ ಚಿಟ್ ಸಿಕ್ಕರೆ ಮತ್ತೆ ಸಿಎಂ ಆಗಲಿ ಎಂದರು.

### ಅ.3 ರಂದು ಯುವ ಸಂಸತ್ ಸ್ಪರ್ಧೆ

» ದಾವಣಗೆರೆ

ಪ್ರಸಕ್ತ ಸಾಲಿನ ಜಿಲ್ಲಾ ಮಟ್ಟದ ಪ್ರೌಢಶಾಲಾ ವಿದ್ಯಾರ್ಥಿಗಳ ಯುವ ಸಂಸತ್ ಸ್ಪರ್ಧೆಯನ್ನು ಅಕ್ಟೋಬರ್ 3 ರಂದು ಬೆಳಿಗ್ಗೆ 10 ಗಂಟೆಗೆ ನಗರದ ನಿಟುವಳ್ಳಿಯಲ್ಲಿನ ಆರ್.ಎಂ.ಎಸ್.ಎ. ಪ್ರೌಢಶಾಲೆಯಲ್ಲಿ ಆಯೋಜಿಸಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೊಟ್ರೇಶ್ ತಿಳಿಸಿದ್ದಾರೆ.

### ಮಹನೀಯರ ಜಯಂತಿಯಲ್ಲಿ ಸಚಿವ ಡಿ.ಸುಧಾಕರ್ ಬಣ್ಣನೆ

# ಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರೀ ಸತ್ಯ, ಅಹಿಂಸೆ, ತ್ಯಾಗ ಸರಳತೆಯ ಪ್ರತೀಕ

» ಚಿತ್ರದುರ್ಗ

ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರೀಯವರು ಸತ್ಯ, ಅಹಿಂಸೆ, ತ್ಯಾಗ, ಬಲಿದಾನ ಮತ್ತು ಸರಳತೆ ಮೌಲ್ಯಗಳ ಪ್ರತೀಕವಾಗಿದ್ದಾರೆ. ಭಾರತದ ಇತಿಹಾಸದಲ್ಲಿ ಅಕ್ಟೋಬರ್ 02 ಈ ಮಹನೀಯರು ಜನಿಸಿದ ಸುದಿನವಾಗಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಬಣ್ಣಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಗರಸಭೆ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಏರ್ಪಡಿಸಲಾದ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿಯವರ ತತ್ವಾದರ್ಶಗಳು ಒಂದೇ ರೀತಿಯಾಗಿದ್ದು, ನಮಗೆಲ್ಲರಿಗೂ ಆದರ್ಶಪ್ರಾಯವಾಗಿವೆ. ತಾವು ಪ್ರತಿಪಾದಿಸಿದಆದರ್ಶಗಳಂತೆಬದುಕಿದಈ ಇಬ್ಬರೂ ಮಹನೀಯರು ಜನಸಾಮಾನ್ಯರು ಹಾಗೂ ದೇಶದ ಒಳಿತಿಗಾಗಿ ಶ್ರಮಿಸಿದರು. ಸ್ವಾತಂತ್ರ್ಯ ಹೋರಾಟದಲ್ಲಿ ಸಂಪೂರ್ಣವಾಗಿ ತೊಡಗಿಕೊಂಡಿದ್ದರು. ಈರ್ವರೂ ಮಹನೀಯರ ವಯಸ್ಸಿನ ಅಂತರ ಸುಮಾರು 35 ವರ್ಷಗಳಾಗಿದ್ದು, ಗಾಂಧೀಜಿ ಪ್ರತಿಪಾದಿಸಿದ ಅಹಿಂಸೆ ಹಾಗೂ ಸತ್ಯದ ತತ್ವಗಳನ್ನು ಶಾಸ್ತ್ರೀಜಿಯವರೂ ಸಹ ತಮ್ಮ ಜೀವನದುದ್ದಕ್ಕೂ ಅನುಸರಿಸಿದರು. ಇಬ್ಬರು ಮಹನೀಯರು ದೇಶದ ರಾಜಕೀಯ ಸ್ವಾತಂತ್ರ್ಯ, ಆರ್ಥಿಕ, ಸಾಮಾಜಿಕ ಹಾಗೂ ಸರ್ವಾಂಗೀಣ ಅಭಿವೃದ್ಧಿಗಾಗಿ ಶ್ರಮಿಸಿದರು ಎಂದು ಸಚಿವ ಡಿ.ಸುಧಾಕರ್ ಹೇಳಿದರು.

"ಸ್ವಾತಂತ್ರ್ಯಕ್ಕಿಂತ ನೈರ್ಮಲ್ಯವು ಮುಖ್ಯವಾಗಿದೆ" ಎಂದು ಹೇಳಿದ ಗಾಂಧೀಜಿ ಸ್ವಚ್ಛತೆಗೆ ಆದ್ಯತೆ ನೀಡಿದ್ದರು. ಸ್ವಾತಂತ್ರ್ಯ ಹೋರಾಟದ ಜೊತೆಗೆ ಜನರು ವೈಯಕ್ತಿಕ ಮತ್ತು ಸಾಮಾಜಿಕ ಸ್ವಚ್ಛತೆಯನ್ನು ಮೈಗೂಡಿಸಿಕೊಳ್ಳವಂತೆ ಕರೆ ನೀಡಿದರು. ಗಾಂಧೀಜಿಯವರ ಚಿಂತನೆ, ತತ್ವಾದರ್ಶಗಳನ್ನು ಇಂದಿನ ಯುವ ಪೀಳಿಗೆಗೆ ತಿಳಿಸಿಕೊಡುವ ಉದ್ದೇಶವನ್ನು ನಮ್ಮ ಸರ್ಕಾರ ಹೊಂದಿದೆ. ಜಿಲ್ಲಾಡಳಿತದಿಂದ ಇಲ್ಲಿ





ನಿರಂತರವಾಗಿ ಸಾಹಿತ್ಯ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಂಡು ಹೋಗಲು ಯೋಜಿಸಲಾಗಿದೆ. ಜಯಂತಿಯ ಈ ಶುಭ ದಿನದಂದು ನ್ಯಾಯಯುತ, ಶಾಂತಿಯುತ ಮತ್ತು ಸುಸ್ಥಿರ ಜಗತ್ತಿಗೆ ನಾವು ಹೇಗೆ ಕೊಡುಗೆ ನೀಡಬಹುದುಎಂಬುದರಆತ್ಮಾವಲೋಕನ ಮಾಡಿಕೊಳ್ಳಬೇಕು ಎಂದು ಸಚಿವ ಡಿ.ಸುಧಾಕರ್ ತಿಳಿಸಿದರು.

ನಾವೆಲ್ಲರು ಜೀವನದಲ್ಲಿ ಸತ್ಯ, ಅಹಿಂಸೆ ಮತ್ತು ಸಾಮಾಜಿಕ ನ್ಯಾಯವನ್ನು ಎತ್ತಿಹಿಡಿಯಲು ಹಾಗೂ ವೈಯುಕ್ತಿಕ ಮತ್ತು ಸಾರ್ವಜನಿಕ ಜೀವನದಲ್ಲಿ ಸ್ವಚ್ಛತೆಯನ್ನು ಕಾಪಾಡುವ ಕುರಿತು ಪ್ರತಿಜ್ಞೆ ಮಾಡಿ ಅದರಂತೆ ಬದುಕನ್ನು ರೂಪಿಸಿಕೊಳ್ಳಬೇಕು. ರಾಜ್ಯ ಸರ್ಕಾರ ಸತ್ಯವನ್ನು ಎತ್ತಿ ಹಿಡಿಯುವಲ್ಲಿ ಮತ್ತು ಸಾಮಾಜಿಕನ್ಯಾಯವನ್ನುಪರಿಪಾಲಿಸುವಲ್ಲಿ ಸದಾ ಗಾಂಧೀಜಿಯವರ ಮೌಲ್ಯಗಳನ್ನು ಅಳವಡಿಸಿಕೊಂಡು ಮುನ್ನಡೆಯುತ್ತಾ ಬಂದಿದೆ. ದೇಶದ ಜನತೆಗೆ "ನನ್ನ ಜೀವನವೇ ನನ್ನ ಸಂದೇಶ" ಎಂದು ತಿಳಿಸಿದ ರಾಷ್ಟ್ರಪಿತ ಮಹಾತ್ಮಗಾಂಧೀಜಿಯವರ ಮತ್ತು "ಜೈ ಜವಾನ್ ಜೈ ಕಿಸಾನ್" ಎಂದು ಘೋಷಣೆ ನೀಡಿದ ಲಾಲ್ ಬಹದ್ದೂರ್ ಶಾಸ್ತ್ರಿಯವರ ಆದರ್ಶಗಳನ್ನು ನಾವೆಲ್ಲರೂ ಪಾಲಿಸೋಣ ಎಂದು ಸಚಿವ ಡಿ.ಸುಧಾಕರ್ ಕರೆ ನೀಡಿದರು.

ಮಹಾತ್ಮಾ ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರೀಜಿ ಕುರಿತು ಉಪನ್ಯಾಸ ನೀಡಿದ ಸಾಹಿತಿ ಹಾಗೂ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಕಾರ್ಯದರ್ಶಿ ಹುರುಳಿ ಎಂ.ಬಸವರಾಜ್, ಮಹಾತ್ಮಾ ಗಾಂಧೀಜಿಯವರು ಸತ್ಯಮತ್ತುಅಹಿಂಸೆಯ ನೇತಾರರಾಗಿ ಈ ಎರಡು ಅಸ್ತ್ರಗಳ ಮೂಲಕ ಸಮಾಜದ ಅಂಕುಡೊಂಕುಗಳು,



ಬ್ರಿಟೀಷರ ದಬ್ಬಾಳಿಕೆಯನ್ನು, ಉಳ್ಳವರ ಕಿರುಕುಳ ತಪ್ಪಿಸಿ, ಸಮ ಸಮಾಜಕಟ್ಟುವಲ್ಲಿ ಮಹತ್ತರವಾದ ಕಾರ್ಯ ಮಾಡಿದ್ದಾರೆ. ಗಾಂಧೀಜಿ ಹಾಗೂ ಲಾಲ್ ಬಹದ್ದೂರ್ ಶಾಸ್ತ್ರಿಯವರು ಚಿಂತನೆಗಳು ಸರ್ವಕಾಲಿಕವಾಗಿವೆ. ಇಂತಹ ಮಹಾನ್ ಆದರ್ಶ ವ್ಯಕ್ತಿಗಳ ಜೀವನ ಚರಿತ್ರೆ ಓದುವ ಮೂಲಕ ನಮ್ಮ ಬದುಕು ಕಟ್ಟಿಕೊಳ್ಳೋಣ ಎಂದು ಹೇಳಿದರು.ಮಹಾತ್ಮಾ ಗಾಂಧೀಜಿ ಜಯಂತಿ ಅಂಗವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಜಿಲ್ಲೆಯ ಪ್ರೌಢಶಾಲೆ, ಪದವಿಪೂರ್ವ ಕಾಲೇಜು ಹಾಗೂ ಪದವಿ, ಸ್ನಾತಕೋತ್ತರ ಪದವಿ ಕಾಲೇಜುಗಳ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಜಿಲ್ಲಾ ಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ಹಾಗೂ ಪ್ರಮಾಣ ಪತ್ರ ವಿತರಿಸಲಾಯಿತು. ಜಿಲ್ಲಾ ಆಯುಷ್ ಇಲಾಖೆ ವತಿಯಿಂದ ವಿದ್ಯಾರ್ಥಿಗಳಿಗೆ ಆಯುಷ್ ಕಿಟ್ ವಿತರಣೆ ಮಾಡಲಾಯಿತು. ಸ್ವಚ್ಛತಾ ಹೀ ಸೇವಾ ಪಾಕ್ಷಿಕದ ಅಂಗವಾಗಿ ಸ್ವಭಾವ ಸ್ವಚ್ಛತೆ-ಸಂಸ್ಕಾರ ಸ್ವಚ್ಛತೆ ಅಭಿಯಾನದಡಿ ಸ್ವಚ್ಛತೆ, ನೈರ್ಮಲ್ಯ ಹಾಗೂ ಐಇಸಿ ಹಾಗೂ ವಿವಿಧ 08 ವಿಭಾಗಗಳಲ್ಲಿ ನಗರ ಸ್ಥಳೀಯ ಸಂಸ್ಥೆಗಳ ನಡುವೆ ಏರ್ಪಡಿಸಿದ ಸ್ಪರ್ಧೆಯಲ್ಲಿ ಚಿತ್ರದುರ್ಗ ನಗರಸಭೆಗೆ 07 ಪ್ರಶಸ್ತಿ ಲಭಿಸಿದ್ದು, ಅತ್ಯುತ್ತಮ ಸಾಧನೆ ತೋರಿದ ನಗರ ಸ್ಥಳೀಯ ಸಂಸ್ಥೆಗಳಿಗೆ ಹಾಗೂ ಪೌರಕಾರ್ಮಿಕರಿಗೆ ಪ್ರಶಸ್ತಿ ಹಾಗೂ ಸ್ಮರಣಿಕೆ ವಿತರಿಸಲಾಯಿತು.

ಇದೇ ಸಂದರ್ಭದಲ್ಲಿ ಚಿತ್ರದುರ್ಗ ಸಂತಜೋಸೆಫ್ ಕಾನ್ವೆಂಟ್ ಶಾಲೆಯ ವಿದ್ಯಾರ್ಥಿಗಳು ಸರ್ವಧರ್ಮ ಪ್ರಾರ್ಥನೆ ಮಾಡಿದರು. ಆಹಾರ ಇಲಾಖೆ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ್ ಅವರು ಇದೇ ವೇಳೆ ಸ್ವಚ್ಛತಾ ಪ್ರತಿಜ್ಞಾ ವಿಧಿ ಬೋಧಿಸಿದರು.ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಶಿವಣ್ಣ, ಉಪಾಧ್ಯಕ್ಷ ಡಿ.ಎನ್.ಮೈಲಾರಪ್ಪ, ಕೆ.ಡಿ.ಪಿ ಸದಸ್ಯ ನಾಗರಾಜು, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿ.ಪಂ ಸಿಇಓ ಎಸ್. ಜೆ.ಸೋಮಶೇಕರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್. ಜೆ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕ ಮಹೇಂದ್ರ ಕುಮಾರ್, ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್, ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ್ ನಾಗಸಮುದ್ರ, ತಹಸಿಲ್ದಾರ್ ನಾಗವೇಣಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು. ರಂಗಕರ್ಮಿ ಕೆ.ಪಿ.ಎಂ. ಗಣೇಶಯ್ಯ ನಿರೂಪಿಸಿ, ವಂದಿಸಿದರು. ವಿರಾಜ, ಭಾರ್ಗವಿ ಹಾಗೂ ಸಂತ ಜೋಸೆಫ್ ಕಾನ್ವೆಂಟ್ ಶಾಲಾ ಮಕ್ಕಳ ತಂಡದಿಂದ ಗಾಂಧೀಜಿಯವರಿಗೆ ಪ್ರಿಯವಾದ ಗೀತ ಗಾಯನ ಪ್ರಸ್ತುತಪಡಿಸಲಾಯಿತು.

ಸ್ವಚ್ಛತಾ ನಡಿಗೆಗೆ ಚಾಲನೆ: ಮಹಾತ್ಮಾ ಗಾಂಧೀಜಿ ಜಯಂತಿ ಅಂಗವಾಗಿ ನಗರದ ಹೊಳಲ್ಕೆರೆ ರಸ್ತೆಯ ನೀಲಕಂಠೇಶ್ವರ ದೇಗುಲದ ಮುಂಭಾಗದಿಂದ "ಸ್ವಚ್ಛತಾ ನಡಿಗೆ" ಕಾರ್ಯಕ್ರಮಕ್ಕೆ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

## ಪ್ರಮುಖ ಸುದ್ದಿ

# ಭಾರತೀಯರ ಸ್ವಾತಂತ್ರ್ಯದ ಕನಸನ್ನು ನನಸು ಮಾಡಿದ ಧೀಮಂತನಾಯಕ ರಾಷ್ಟ್ರಪಿತ ಗಾಂಧೀಜಿ: ರಘುಮೂರ್ತಿ

» ಚಳ್ಳಕೆರೆ

ರಾಷ್ಟ್ರದ ಸ್ವಾತಂತ್ರ್ಯಕ್ಕಾಗಿ ಹೋರಾಟ ಮಾಡುವ ಕಿಚ್ಚು ಆರಂಭವಾಗಿದ್ದೇ ಕರ್ನಾಟಕ ಬೆಳಗಾವಿಯಲ್ಲಿ. 1924ರಲ್ಲಿ ಬೆಳಗಾವಿಯಲ್ಲಿ ನಡೆದ ಕಾಂಗ್ರೆಸ್ ಪಕ್ಷದ ಅಧಿವೇಶನದಲ್ಲಿ ಮಹಾತ್ಮಗಾಂಧೀಜಿ ಸಭೆಯ ಅಧ್ಯಕ್ಷತೆ ವಹಿಸಿ ಸ್ವಾತಂತ್ರ್ಯಕ್ಕಾಗಿ ಹೋರಾಡದಲು ಸಭೆ ಅವರಿಗೆ ಸಂಪೂರ್ಣ ಸರ್ವಾನುಮತದ ಒಪ್ಪಿಗೆ ನೀಡಿದ ನಂತರ ದೇಶದ ಸ್ವಾತಂತ್ರ್ಯ ಪಡೆಯುವ ಕನಸಿಗೆ ಗಾಂಧಿಯವರು ಮುನ್ನುಡಿ ಬರೆದು ಇಂದಿಗೆ 100 ವರ್ಷಗಳು ಸಂದಿದ್ದು, ಗಾಂಧಿ ಭಾರತ ಎಂಬ ಕಾರ್ಯಕ್ರಮದಡಿ ಒಂದು ಕಿ.ಮೀ ಪಾದಯಾತ್ರೆ ನಡೆಸಿ ಗಾಂಧಿಯವರ ಸ್ವಾತಂತ್ರ್ಯದ ಹೆಜ್ಜೆ ಗುರುತಿಸುವ ಕಾರ್ಯವನ್ನು ಕಾಂಗ್ರೆಸ್ ಪಕ್ಷ ಗಾಂಧಿ ನಡಿಗೆ ಮೂಲಕ ಸ್ಮರಿಸಿದೆ ಎಂದು ಕ್ಷೇತ್ರದ ಶಾಸಕ, ಸಣ್ಣ ಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.




ಅವರು, ಬುಧವಾರ ಬೆಂಗಳೂರು ರಸ್ತೆಯ ಕಾಂಗ್ರೆಸ್ ಪಕ್ಷದ ಕಚೇರಿಯಲ್ಲಿ ಗಾಂಧಿನಡಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಶಾಸಕರ ಭವನದ ಆವರಣದಲ್ಲಿ ನಡೆದ ಕಾರ್ಯಕರ್ತರ ಸಭೆಗೆ ಚಾಲನೆ ನೀಡಿ ಮಾತನಾಡಿದರು. ಮಹಾತ್ಮಗಾಂಧೀಜಿಯವರು ಅಹಿಂಸಾ ತತ್ವದ ಮೂಲಕ ನಮಗೆ ಸ್ವಾತಂತ್ರ್ಯ ತಂದುಕೊಟ್ಟಿದ್ದಾರೆ. ನೂರಾರು ವರ್ಷಗಳ ಕಾಲ ಬ್ರಿಟೀಷರ ಕಪಿಮುಷ್ಠಿಯ ಆಡಳಿತಕ್ಕೆ ಭಾರತೀಯರು ರೋಸಿದ್ದರು. ಬ್ರಿಟೀಷರನ್ನು ವಿರೋಧಿಸುವ ದೈರ್ಯ ಯಾರಿಗೂ ಇರಲಿಲ್ಲ. ಇಡೀ ದೇಶವೇ ಸ್ವಾತಂತ್ರ್ಯಕ್ಕಾಗಿ ಹಂಬಲಿಸುತ್ತು.ಬ್ರಿಟೀಷರದಾಸ್ಯದಿಂದಮುಕ್ತಿ ಪಡೆಯುವ ಸಂಕಲ್ಪ ಭಾರತೀಯರಾಗಿತ್ತು. ಭಾರತೀಯರ ಸ್ವಾತಂತ್ರ್ಯದ ಕನಸನ್ನು ನನಸು ಮಾಡಿದ ಗಾಂಧಿಯವರು ನಮ್ಮೆಲ್ಲರ ಪಾಲಿನ ಹೆಮ್ಮೆಯ ರಾಷ್ಟ್ರಪಿತ ಮಹಾತ್ಮಗಾಂಧೀಜಿಯಾದರು. ಕಾಂಗ್ರೆಸ್ ಪಕ್ಷ ಅವರ ಸೇವೆಯನ್ನು ಸದಾಸ್ಮರಿಸುತ್ತದೆ ಎಂದರು.ಮಾಜಿ ಸಂಸದ ಬಿ.ಎನ್.ಚಂದ್ರಪ್ಪ, ಮಹಾತ್ಮಗಾಂಧೀಜಿಯವರ ಸ್ವಾತಂತ್ರ್ಯದ ಹೋರಾಟದ ಬಗ್ಗೆ ಪಕ್ಷದ ಕಾರ್ಯಕರ್ತರು ಮುಖಂಡರಿಗೆ ಗಾಂಧಿನಡಿಗೆ ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ. ಇಡೀ ದೇಶವೇ ಮಹಾತ್ಮಗಾಂಧೀಜಿಯವರ ತ್ಯಾಗ, ಬಲಿದಾನದ ಬಗ್ಗೆ ಹೆಮ್ಮೆ ಪಡುತ್ತಿದೆ. ವಿಶ್ವದಲ್ಲೇ ಪ್ರಜಾಪ್ರಭುತ್ವದಡಿಯಲ್ಲಿ ಆಡಳಿತ ನಡೆಸುತ್ತಿರುವ ನಮಗೆ ನಮ್ಮ ಸಂವಿಧಾನವೇ ಪ್ರೇರಣೆ. ಮಹಾತ್ಮಗಾಂಧೀಜಿ, ಡಾ.ಬಿ.ಆರ್.ಅಂಬೇಡ್ಕರ್, ಲಾಲ್‌ಬಹದ್ದೂರುಶಾಸ್ತ್ರಿಯಂತಹ ಮಹಾನ್ ನಾಯಕರು ನಮ್ಮೆಲ್ಲರಿಗೂ ಆದರ್ಶಪ್ರಾಯರು.


ಪುಟ ↘ 2



ಪುರಸಭಾ ಕಾರ್ಯಾಲಯ, ಹೊಸದುರ್ಗ-577527
ಜಿಲ್ಲೆ : ಚಿತ್ರದುರ್ಗ

E - Mail: tmchosdurga@yahoo.com | ದೂರವಾಣಿ:- (08199) 230221
Website: www.hosadurgatown.gov.in | ಜನಹಿತ:- 080-23108108
ನಂ.ಪುಸಹೊ/ಆ.ಶಾ/ಸಿಆರ್-157 /2024-25 | ದಿನಾಂಕ: 03-10-2024

ಬಹಿರಂಗ ಹರಾಜು ಪ್ರಕಟಣೆ

ಹೊಸದುರ್ಗ ಪುರಸಭೆಗೆ ಸಂಬಂಧಿಸಿದಂತೆ ಘನತ್ಯಜ್ಯ ವಿಲೇವಾರಿ ಘಟಕದಲ್ಲಿ ದಿನಾಂಕ: 01-08-2024 ರಿಂದ 30-09-2024 ರವರೆಗೆ ಸಂಗ್ರಹವಾದ ತ್ಯಾಜ್ಯವನ್ನು ವಿಂಗಡಿಸಿ ಪುನರ್ ಬಳಕೆ ಮಾಡುವಂತಹ ವಸ್ತುಗಳನ್ನು ಬಹಿರಂಗ ಹರಾಜು ಪ್ರಕ್ರಿಯೆ ಮೂಲಕ ವಿಲೇಮಾಡಲಾಗುತ್ತಿದ್ದು. ಆಸಕ್ತ ಗುಜರಿ ವ್ಯಾಪಾರಸ್ಥರು/ಚಿಂದಿ ಆಯುವವರು/ರೈತರು/ ಆಸಕ್ತ ಇತರೇ ವ್ಯಾಪಾರಸ್ಥರು ರೂ.250/-ಗಳನ್ನು ಮುಖ್ಯಾಧಿಕಾರಿ ಪುರಸಭೆ, ಹೊಸದುರ್ಗ ರವರ ಹೆಸರಿಗೆ ಡಿ.ಡಿ ಮೂಲಕ ಸಂದಾಯ ಮಾಡಿ, ಡಿ.ಡಿ ಪ್ರತಿಯನ್ನು ದಿನಾಂಕ:09-10-2024ರ ಸಂಜೆ 4:00 ಗಂಟೆಯೊಳಗಾಗಿ ಕಛೇರಿಗೆ ಸಲ್ಲಿಸಿ ದಿನಾಂಕ: 09-10-2024ರ ಸಂಜೆ 4:30 ಗಂಟೆಗೆ ಘನತ್ಯಾಜ್ಯ ವಿಲೇವಾರಿ ಘಟಕದಲ್ಲಿ ನಡೆಯುವ ಬಹಿರಂಗ ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಛೇರಿ ವೇಳೆ ಪುರಸಭೆ ಆರೋಗ್ಯ ಶಾಖೆಯಲ್ಲಿ ಸಂಪರ್ಕಿಸಬಹುದಾಗಿದೆ ವಿವರ:- (1) ಘನತ್ಯಾಜ್ಯದಿಂದ ವಿಂಗಡಿಸಿದ ಹಸಿ ತ್ಯಾಜ್ಯ (SEGGREGATED WET WASTE) ಗೊಬ್ಬರ COMPOST (2) ಘನತ್ಯಾಜ್ಯದಿಂದ ವಿಂಗಡಿಸಿದ ಒಣ ತ್ಯಾಜ್ಯ (SEGGREGATED DRY WASTE) (3) ದಿನಾಂಕ: 01-08-2024 ರಿಂದ 30-09-2024 ರವೆರೆಗೆ ಘನತ್ಯಾಜ್ಯದ ಒಣ ಕಸದಿಂದ ಸಂಗ್ರಹವಾದ ಪುನರ್ ಬಳಕೆ ಮಾಡುವಂತಹ ಹಳೆ ಕಬ್ಬಿಣ, ಪ್ಲಾಸ್ಟಿಕ್ ಬಾಟಲ್, ರೊಟ್ಟು, ಗಾಜು, ರಬ್ಬರ್, ತೆಂಗಿನ ಕಾಯಿ ಚಿಪ್ಪು, ಕವುಟು ಹಾಗೂ ಇತರೇ ವಸ್ತುಗಳು.

ಸಹಿ/-
ಮುಖ್ಯಾಧಿಕಾರಿ
ಪುರಸಭೆ,ಹೊಸದುರ್ಗ

## ಫಾಸ್ಟ್ ನ್ಯೂಸ್

### ಗಾಂಧೀಜಿ ಮತ್ತು ಲಾಲ್ ಬಹದ್ದೂರ್ ಶಾಸ್ತ್ರೀ ಸತ್ಯ, ಅಹಿಂಸೆ, ತ್ಯಾಗ ಸರಳತೆಯ ಪ್ರತೀಕ

» ಮೊದಲ ಪುಟದಿಂದ

ಮಹಾತ್ಮಾ ಗಾಂಧೀಜಿ ಜಯಂತಿ ಅಂಗವಾಗಿ ಹಮ್ಮಿಕೊಂಡಿದ್ದ ಸ್ವಚ್ಛತಾ ನಡಿಗೆ ಕಾರ್ಯಕ್ರಮಕ್ಕೆ ಮುನ್ನ ನಗರದ ನೀಲಕಂಠೇಶ್ವರ ದೇಗುಲದಲ್ಲಿರುವ ಮಹಾತ್ಮಾ ಗಾಂಧೀಜಿಯವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು, ನಂತರ ಸಚಿವರು ಕೂಡ ಕಾಲ್ನಡಿಗೆಯಲ್ಲಿ ಪಾಲ್ಗೊಂಡು ಗಾಂಧಿ ವೃತ್ತ, ಎಸ್‌ಬಿಎಂ ವೃತ್ತ, ಪ್ರವಾಸಿ ಮಂದಿರ ಮಾರ್ಗವಾಗಿ ಜಿಲ್ಲಾಧಿಕಾರಿಗಳ ಕಚೇರಿಗೆವರೆಗೆ ಸ್ವಚ್ಛತಾ ನಡಿಗೆ ನಡೆಸಲಾಯಿತು. ದಾರಿಯುದ್ದಕ್ಕೂ ಸಾರ್ವಜನಿಕರಿಗೆ ಸ್ವಚ್ಛತೆ ಕುರಿತು ಜಾಗೃತಿ ಮೂಡಿಸುವ ಜಾಗೃತಿ ಫಲಕಗಳನ್ನು ಪ್ರದರ್ಶಿಸಲಾಯಿತು. ಬಳಿಕ ಎಲ್ಲ ಗಣ್ಯರಿಂದ ಒನಕೆ ಓಬವ್ವ ವೃತ್ತ ಆವರಣದಲ್ಲಿ ಸ್ವಚ್ಛತಾ ಶ್ರಮದಾನ ಕೈಗೊಳ್ಳಲಾಯಿತು.

ಈ ಸಂದರ್ಭದಲ್ಲಿ ನಗರಸಭೆ ಅಧ್ಯಕ್ಷೆ ಸುಮಿತಾ ಬಿ.ಎನ್., ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪ ವಿಭಾಗಾಧಿಕಾರಿ ಎಂ.ಕಾರ್ತಿಕ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ ಸೇರಿದಂತೆ ಜನಪ್ರತಿನಿಧಿಗಳು, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು, ಸಾರ್ವಜನಿಕರು ಇದ್ದರು.

### ಭಾರತೀಯರ ಸ್ವಾತಂತ್ರ್ಯದ ಕನಸನ್ನು ನನಸು ಮಾಡಿದ ಗಾಂಧೀಜಿ: ರಘುಮೂರ್ತಿ

» ಮೊದಲ ಪುಟದಿಂದ

ನಾವೆಲ್ಲರೂ ನಮ್ಮ ಬದುಕಿನಲ್ಲಿ ಏನೇ ಸಾಧನೆ ಮಾಡಲಿ ಇಂತಹ ಮಹಾನ್ ಸಾಧಕರನ್ನು ಆದರ್ಶವಾಗಿಟ್ಟುಕೊಂಡು ನಡೆಯೋಣ. ಕಾಂಗ್ರೆಸ್ ಪಕ್ಷದಿಂದ ಮಾತ್ರ ದೇಶಕ್ಕಾಗಿ ಸೇವೆ ಸಲ್ಲಿಸಿದ ನಾಯಕರ ಸ್ಮರಣೆ ಸಾಧ್ಯ. ಬಿಜೆಪಿಯವರಿಗೆ ಸ್ವಾತಂತ್ರ್ಯದ ಬಗ್ಗೆ ಯಾವುದೇ ರೀತಿಯ ವಿಶ್ವಾಸವಿಲ್ಲ, ಕೇವಲ ಸರ್ಕಾರದ ವಿರುದ್ಧ ಟೀಕೆ ಮಾಡುವುದನ್ನು ಮಾತ್ರ ಮುಂದುವರೆಸಿದ್ದಾರೆಂದರು. ಗಾಂಧಿನಡಿಗೆ ಕಾರ್ಯಕ್ರಮ ಉದ್ದೇಶಿಸಿ ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಶಶಿಕಲಾಸುರೇಶ್‌ಬಾಬು, ರವಿಕುಮಾರ್, ಬಾಬುರೆಡ್ಡಿ, ನಗರಸಭಾ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಸುಜಾತ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ, ಗ್ಯಾರಂಟಿ ಸಮಿತಿ ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ ಮಾತನಾಡಿದರು. ಗಾಂಧಿನಡಿಗೆ ಕಾರ್ಯಕ್ರಮ ಬೆಂಗಳೂರು ರಸ್ತೆಯ ಕಾಂಗ್ರೆಸ್ ಕಚೇರಿಯಿಂದ ನೆಹರೂ ವೃತ್ತ, ಅಂಬೇಡ್ಕರ್ ವೃತ್ತ, ವಾಲ್ಮೀಕಿ ವೃತ್ತದ ಮೂಲಕ ಶಾಸಕರ ಭವನಕ್ಕೆ ಆಗಮಿಸಿತು. ಪಕ್ಷ ನೂರಾರು ಕಾರ್ಯಕರ್ತರು, ಮುಖಂಡರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ವೇದಿಕೆಯಲ್ಲಿ ನಗರಸಭಾ ಸದಸ್ಯರಾದ ಕವಿತಾಬೋರಯ್ಯ, ಸುಮಾಭರಮಣ್ಣ, ಸಾವಿತ್ರಮ್ಮ, ರಮೇಶ್‌ಗೌಡ, ಎಂ.ಜೆ.ರಾಘವೇಂದ್ರ, ಮುಖಂಡರಾದ ಟಿ.ಪ್ರಭುದೇವ್, ಪಿ.ತಿಪ್ಪೇಸ್ವಾಮಿ, ಶಶಿಧರ, ಚನ್ನಕೇಶವಮೂರ್ತಿ, ಸ್ವಾಮಿ, ಲಕ್ಷ್ಮಿದೇವಿ, ಬಿ.ಎಂ.ಭಾಗ್ಯಮ್ಮ, ಗೀತಾಬಾಯಿ, ಸುರೇಶ್, ರಾಘವೇಂದ್ರ, ಚೌಳೂರುಪ್ರಕಾಶ್, ಸೈಪುಲ್ಲಾ, ಭೀಮಣ್ಣಕುರುಗುಂದ, ಬಷೀರ್‌ಸಾಬ್ ಮುಂತಾದವರು ಉಪಸ್ಥಿತರಿದ್ದರು.

### ಮಾತೃಶ್ರೀ ಸಂಸ್ಥೆಯಲ್ಲಿ ಗಾಂಧಿ, ಶಾಸ್ತ್ರಿಯವರ ಜಯಂತಿ ಆಚರಣೆ.



» ಚಿತ್ರದುರ್ಗ

ನಗರದ ಸ್ಟೇಡಿಯಂ ರಸ್ತೆಯಲ್ಲಿರುವ ಮಾತೃಶ್ರೀ ವಿದ್ಯಾಸಂಸ್ಥೆಯಲ್ಲಿ ಮಹಾತ್ಮಗಾಂಧಿ ಹಾಗೂ ಲಾಲ್‌ಬಹದ್ದೂರ್‌ಶಾಸ್ತ್ರಿಯವರ ಜಯಂತಿಯನ್ನು ಆಚರಿಸಲಾಯಿತು. ಸಂಸ್ಥೆಯ ಸಂಸ್ಥಾಪಕ ಡಾ.ಪಿ.ಪ್ರಶಾಂತ್ ಮಾತನಾಡಿ ಮಹಾತ್ಮಗಾಂಧಿ ಮತ್ತು ಲಾಲ್‌ಬಹದ್ದೂರ್‌ಶಾಸ್ತ್ರಿ ಇವರುಗಳು ದೇಶಕ್ಕಾಗಿ ಹೋರಾಡಿ ಪ್ರಾಣ ತ್ಯಾಗ ಮಾಡಿದ್ದಾರೆ. ಇಂದಿನ ಪೀಳಿಗೆ ಈ ಇಬ್ಬರು ಮಹನೀಯರ ವಿಚಾರವನ್ನು ತಿಳಿದುಕೊಂಡು ದೇಶಭಕ್ತಿ ಮೈಗೂಡಿಸಿಕೊಳ್ಳುವಂತೆ ತಿಳಿಸಿದರು. ಜಯಂತಿಯಲ್ಲಿ ಮಾತೃಶ್ರೀ ಸಂಸ್ಥೆಯ ಶಿಕ್ಷಕ ವೃಂದ ಹಾಗೂ ಸಿಬ್ಬಂದಿಯವರು ಪಾಲ್ಗೊಂಡಿದ್ದರು.

### ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ, 5 ರಂದು ಸಭೆ

» ದಾವಣಗೆರೆ

ಪ್ರಸಕ್ತ ಸಾಲಿನ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಅಕ್ಟೋಬರ್ 17 ರಂದು ಗುರುವಾರ ಜಿಲ್ಲಾ ಕೇಂದ್ರದಲ್ಲಿ ಆಚರಿಸಲು ಸಿದ್ದತೆಗಾಗಿ ಅಕ್ಟೋಬರ್ 5 ರ ಬೆಳಿಗ್ಗೆ 11 ಗಂಟೆಗೆ ಅಪರ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಹಾಗೂ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ.

---

ಪೂರ್ವಭಾವಿ ಸಭೆಯಲ್ಲಿ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್

# ವಾಲ್ಮೀಕಿ ಜಯಂತಿ: ಅರ್ಥಪೂರ್ಣ ಆಚರಣೆ

» ಚಿತ್ರದುರ್ಗ

ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಜಿಲ್ಲಾ ಕೇಂದ್ರದಲ್ಲಿ ಇದೇ ಅಕ್ಟೋಬರ್ 17 ರಂದು ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದ್ದು, ಈ ನಿಟ್ಟಿನಲ್ಲಿ ಅಗತ್ಯ ಪೂರ್ವಸಿದ್ಧತೆ ಕೈಗೊಳ್ಳುವಂತೆ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ ಸಂಬಂಧ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಜಯಂತಿ ಅಂಗವಾಗಿ ಅಕ್ಟೋಬರ್ 17ರಂದು ಬೆಳಿಗ್ಗೆ 10ಕ್ಕೆ ನಗರದ ಐತಿಹಾಸಿಕ ಕೋಟೆ ಮುಂಭಾಗದಿಂದ ಮಹರ್ಷಿ ವಾಲ್ಮೀಕಿ ಭಾವಚಿತ್ರದ ಮೆರವಣಿಗೆ ಪ್ರಾರಂಭವಾಗಿ ಆನೆಬಾಗಿಲು ಮೂಲಕ, ಗಾಂಧಿವೃತ್ತ, ಮದಕರಿ ನಾಯಕ ವೃತ್ತದ ಮೂಲಕ ತರಾಸು ರಂಗಮಂದಿರ ತಲುಪಲಿದೆ. ಮಧ್ಯಾಹ್ನ 12ಕ್ಕೆ ನಗರದ ತರಾಸು ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ ಎಂದು ಹೇಳಿದರು.

ಸರ್ಕಾರದ ಶಿಷ್ಟಾಚಾರದ ಅನುಸಾರ ಆಹ್ವಾನಪತ್ರಿಕೆಮುದ್ರಿಸಿ,ಜನಪ್ರತಿನಿಧಿಗಳನ್ನು ಜಯಂತಿಗೆ ಕರೆಯಲಾಗುವುದು. ಉತ್ತಮ ವಾಗ್ಮಿಗಳಿಂದ ಉಪನ್ಯಾಸ ಹಾಗೂ ಗೀತ ಗಾಯನ ಕಾರ್ಯಕ್ರಮ ಆಯೋಜಿಸಲಾಗುವುದು ಎಂದು ಹೇಳಿದರು.

ನಗರಸಭೆ ವತಿಯಿಂದ ತ.ರಾ.ಸು ರಂಗಮಂದಿರ ಸ್ವಚ್ಛತಾ ಕಾರ್ಯ ಹಾಗೂ ಶುದ್ಧ ಕುಡಿಯುವ ನೀರಿನ ಪೂರೈಕೆ ವ್ಯವಸ್ಥೆ ಕಲ್ಪಿಸಬೇಕು. ತೋಟಗಾರಿಕೆ ಇಲಾಖೆ ವತಿಯಿಂದ ವೇದಿಕೆ ಕಾರ್ಯಕ್ರಮದ ಸ್ಥಳದಲ್ಲಿ ಹೂವಿನ ಕುಂಡಗಳನ್ನು ನೀಡಬೇಕು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇಲಾಖೆ ಅಧಿಕಾರಿಗಳು ತ.ರಾ.ಸು ರಂಗಮಂದಿರ ಕಾಯ್ದಿರಿಸುವುದರೊಂದಿಗೆ ಅಗತ್ಯ ಕಲಾತಂಡದ ವ್ಯವಸ್ಥೆ ಮಾಡುವಂತೆ ತಿಳಿಸಿದರು.ಜಿಲ್ಲಾ ಮಟ್ಟದಲ್ಲಿ ಶ್ರೀ ವಾಲ್ಮೀಕಿ ಜಯಂತಿಯನ್ನು ಅರ್ಥಪೂರ್ಣವಾಗಿ ಹಾಗೂ ಜಯಂತಿ ಯಶಸ್ವಿಗೆ ವಿವಿಧ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದ ಅವರು, ವಸತಿ ನಿಲಯ ಹಾಗೂ ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ವಿಚಾರ ಸಂಕಿರಣ, ಉಪನ್ಯಾಸ ಮಾಲಿಕೆ ಕಾರ್ಯಕ್ರಮ ಏರ್ಪಡಿಸಿ, ನಂತರ ಭಾಷಣ, ಪ್ರಬಂಧ ಸ್ಪರ್ಧೆ ಕಾರ್ಯಕ್ರಮ ಹಮ್ಮಿಕೊಂಡು ವಾಲ್ಮೀಕಿ ಕುರಿತು ಅರಿವು ಮೂಡಿಸಬೇಕು. ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆಗೆ ಕ್ರಮ ವಹಿಸಬೇಕು ಎಂದು ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಚಿತ್ರದುರ್ಗ ನಗರದ ಮದಕರಿ ವೃತ್ತದಲ್ಲಿ ನಿರ್ಮಿಸಲಾಗಿರುವ ವಾಲ್ಮೀಕಿ ಭವನ ಅವೈಜ್ಞಾನಿಕವಾಗಿ ನಿರ್ಮಾಣವಾಗಿದ್ದು, ಇಲ್ಲಿಯಾವುದೇಕಾರ್ಯಕ್ರಮಆಯೋಜನೆ ಮಾಡಲು ಸಾಧ್ಯವಾಗುತ್ತಿಲ್ಲ. ಈ ಕುರಿತು ಜಿಲ್ಲಾಡಳಿತಕ್ಕೆ ಮನವಿ ಮಾಡಲಾಗಿದೆ. ವಾಲ್ಮೀಕಿ ಭವನ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಗೆ ಹಸ್ತಾಂತರವಾಗಿಲ್ಲ. ಕೆಲವು ತಾಂತ್ರಿಕ ಸಮಸ್ಯೆಗಳು ಇದ್ದು, ಈ ಕುರಿತು ಸಂಬಂಧಪಟ್ಟವರು ಅಗತ್ಯ ಕ್ರಮ ವಹಿಸಬೇಕು ಎಂದು ತಾಲ್ಲೂಕು ನಾಯಕ ಸಮಾಜದ ಅಧ್ಯಕ್ಷ ಬಿ.ಕಾಂತರಾಜ್ ಅಸಮಾಧಾನ ವ್ಯಕ್ತಪಡಿಸಿದರು. ಇದಕ್ಕೆ ದನಿಗೂಡಿಸಿದ ನಗರಸಭೆ ಸದಸ್ಯ ವೆಂಕಟೇಶ್, ಜಿಲ್ಲಾ ನಾಯಕ ಸಮಾಜದ ಅಧ್ಯಕ್ಷ ಹೆಚ್.ಜೆ.ಕೃಷ್ಣಮೂರ್ತಿ, ವಾಲ್ಮೀಕಿ ಭವನ ಉಪಯೋಗಕ್ಕೆ ಬಾರದ ಸ್ಥಿತಿಯಲ್ಲಿದೆ ಎಂದು ಹೇಳಿದರು.

ಇದಕ್ಕೆ ಪ್ರತಿಕ್ರಿಯಿಸಿದ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ನಗರದ ಮಧ್ಯಭಾಗದಲ್ಲಿರುವ ವಾಲ್ಮೀಕಿ ಭವನ ಯಾವ ಉದ್ದೇಶಕ್ಕೆ ನಿರ್ಮಾಣವಾಗಿದೆಯೋ ಅದು ಸದುಪಯೋಗವಾಗಬೇಕು. ಇದನ್ನು ಗಂಭೀರವಾಗಿ ಪರಿಗಣಿಸಿದ್ದು, ಆಸಕ್ತಿವಹಿಸಿ ಸಂಬಂಧಪಟ್ಟವರ ಜೊತೆ ಚರ್ಚಿಸಿ, ಸಭೆ ನಡೆಸಿ, ತಕ್ಷಣವೇ ಅಗತ್ಯ ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

ಜಿಲ್ಲಾ ಕಚೇರಿ ಸ್ಥಳಾಂತರಿಸಿ: ಚಿತ್ರದುರ್ಗ ನಗರದ ಜೆಸಿಆರ್ 4ನೇ ಕ್ರಾಸ್, ಗಣೇಶ ದೇವಸ್ಥಾನ ಹತ್ತಿರ ಇರುವ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯನ್ನು ಸಾರ್ವಜನಿಕರ ಹಿತದೃಷ್ಟಿಯಿಂದ ನಗರದ ಬಿ.ಡಿ.ರಸ್ತೆಯ ಪ್ರವಾಸಿ ಮಂದಿರದ ಸಮೀಪ ಲಿಡ್ಕರ್ ಭವನಕ್ಕೆ ಸ್ಥಳಾಂತರಿಸಬೇಕು ಎಂದು ಹಲವು ಬಾರಿ ಮನವಿ ಮಾಡಿದ್ದರೂ ಯಾವುದೇ ಕ್ರಮವಹಿಸಿಲ್ಲ. ವಾಲ್ಮೀಕಿ ಜಯಂತಿಯಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಉದ್ಘಾಟನೆ ಕಾರ್ಯ ಆಗಬೇಕು ಎಂದು ನಾಯಕ ಸಮಾಜದ ಮುಂಡರು ಉಪವಿಭಾಗಾಧಿಕಾರಿ ಎಂ.ಕಾರ್ತಿಕ್‌ಗೆ ಮನವಿ ಮಾಡಿದರು.

ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಜಿಲ್ಲಾ ಕಚೇರಿ ಸ್ಥಳಾಂತರಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಭರವಸೆ ನೀಡಿದರು.ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಜಂಟಿನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್ ಕಾಳೆಸಿಂಗೆ, ಜಿಲ್ಲಾ ನಾಯಕ ಸಮಾಜದ ಅಧ್ಯಕ್ಷ ಹೆಚ್.ಜೆ.ಕೃಷ್ಣಮೂರ್ತಿ, ತಾಲ್ಲೂಕು ನಾಯಕ ಸಮಾಜದ ಅಧ್ಯಕ್ಷ ಬಿ.ಕಾಂತರಾಜ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಹೆಚ್.ದಿವಾಕರ್, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ್, ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ್ ನಾಗಸಮುದ್ರ ಸೇರಿದಂತೆ ನಗರಸಭೆ ಸದಸ್ಯರಾದ ದೀಪು, ವೆಂಕಟೇಶ್, ಸಮಾಜದ ಮುಖಂಡರಾದ ಡಿ.ಗೋಪಾಲಸ್ವಾಮಿ ನಾಯಕ, ರತ್ನಮ್ಮ, ಪ್ರಶಾಂತ ನಾಯಕ, ರಾಜ ಮದಕರಿ ನಾಯಕ, ಗೋಪಿ, ಕಾಟಿಹಳ್ಳಿ ಕರಿಯಣ್ಣ, ಇಂಗಳದಾಳ್ ದರ್ಶನ್ ಸೇರಿದಂತೆ ಮತ್ತಿತರರು ಇದ್ದರು.

---

# ಹೊಸದುರ್ಗ ದಸರಾ ಉತ್ಸವಕ್ಕೆ ಸಕಲ ಸಿದ್ಧತೆ

» ಹೊಸದುರ್ಗ



ಅ 3.ರಿಂದ 12 ರವರೆಗೆ ಪಟ್ಟಣದ ಅಶೋಕ ರಂಗಮಂದಿರದಲ್ಲಿ ದುರ್ಗಾ ಪರಮೇಶ್ವರಿ ಅಮ್ಮನವರ ದಸರಾ ಮಹೋತ್ಸವ ಮತ್ತು ಹೊಸದುರ್ಗ ದಸರಾ ಉತ್ಸವ ನಡೆಯಲಿದ್ದು, 9 ದಿನಗಳು ವಿಶೇಷ ಪೂಜಾ ಕೈಂಕರ್ಯಗಳು ನಡೆಯಲಿವೆ. ಸರ್ವ ಭಕ್ತಾದಿಗಳು ಆಗಮಿಸಬೇಕೆಂದು ದುರ್ಗಾ ಸೇವಾ ಸಮಿತಿ ಅಧ್ಯಕ್ಷ ಟಿ. ಮಂಜುನಾಥ್ ತಿಳಿಸಿದರು.

ಪಟ್ಟಣದ ಅಶೋಕ ರಂಗಮಂದಿರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಈಗಾಗಲೇ, ಕುಂದಾಪುರ ತಾಲೂಕಿನ ಕಕ್ಕೆರಾ ಗ್ರಾಮದ ಶಿಲ್ಪಿ ಜಿ.ಡಿ.ಭಟ್ ಅವರ ಕೈಯಲ್ಲಿ ಸಿಂಹ ಹೊಡೆಯಾಗಿ ಕುಣಿತು, ಅಷ್ಟ ಭುಜಗಳನ್ನು ಹೊಂದಿರುವ ಶ್ರೀ ದುರ್ಗಾಪರಮೇಶ್ವರಿ ಅಮ್ಮನವರ ಮೂರ್ತಿ ತಯಾರಾಗಿದೆ. ಕೃಷ್ಣಮೂರ್ತಿ ಘನಪಾಠಿ ಅವರ ನೇತೃತ್ವದಲ್ಲಿ ದುರ್ಗಾದೇವಿಯ ಪ್ರತಿಷ್ಠಾಪನೆ ನಡೆಯಲಿದೆ. ಮಂಟಪವನ್ನು ಕಂದು ಬಣ್ಣದ ಬಟ್ಟೆ ಮತ್ತು ಅಲಂಕಾರಿಕ ವಸ್ತುಗಳಿಂದ ಸಿಂಗರಿಸಲಾಗಿದೆ. ದೀಪಾಲಂಕಾರಕ್ಕೆ ಈ ಬಾರಿ ಒತ್ತು ನೀಡಲಾಗಿದೆ. ದೇವಿಪ್ರಸಾದ್, ಗಣೇಶ್ ಭಟರು, ಶ್ರೀನಿವಾಸ್, ರಮೇಶ್ ಭಟರು ನೇತೃತ್ವದಲ್ಲಿ ನಿತ್ಯ ಪೂಜೆ ನಡೆಯಲಿದೆ ಎಂದರು.

ದೇವಿ ಪ್ರತಿಷ್ಠಾಪನೆ ಆದಾಗಿನಿಂದ ನಿತ್ಯ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯುತ್ತವೆ. ಹರಿಕಥೆ, ಭಜನೆ, ಭರತನಾಟ್ಯ, ನೃತ್ಯ ಸಂಜೆ, ಜಾನಪದ ವೈಭವ, ದೀಪೋತ್ಸವ, ಸುಗಮ ಸಂಗೀತ, ಕುಮಾರಿ ಪೂಜೆ, ನವಚಂಡಿಕಾ ಹೋಮ ಹಾಗೂ ದಾಂಡಿಯ ನೃತ್ಯ ನಡೆಯಲಿವೆ. 7ನೇ ವರ್ಷದ ದಸರಾ ಮಹೋತ್ಸವ ಇದಾಗಿದ್ದು, ತಾಯಿಯ ಆರ್ಶೀವಾದದಿಂದ ರಾಜ್ಯಾದ್ಯಂತ ಉತ್ತಮ ಮಳೆಯಾಗಲಿ, ರೈತರು ಸುಭಿಕ್ಷವಾಗಿ ಜೀವನ ಸಾಗಿಸುವಂತಾಗಲಿ. ತಾಲ್ಲೂಕಿನ ಜನತೆಗೆ ಒಳಿತಾಗಲಿ ಎಂದು ಈ ಕಾರ್ಯ ಮಾಡಲಾಗುತ್ತಿದೆ. ತಾಲ್ಲೂಕಿನ ಜನತೆ ದೇವಿಯ ದರ್ಶನ ಪಡೆಯಬೇಕೆಂದು ಮನವಿ ಮಾಡಿದರು. ಈ ವೇಳೆ ಡಿ.ಹೆಚ್. ನಾಗರಾಜ್, ಜಿತೇಂದ್ರ, ಭರತ್, ಪ್ರವೀಣ್, ರಾಘವೇಂದ್ರ, ಪ್ರದೀಪ್ ಮತ್ತು ರಾಮಚಂದ್ರ ಸೇರಿದಂತೆ ದುರ್ಗಾ ಸೇವಾ ಸಮಿತಿ ಸದಸ್ಯರಿದ್ದರು.






ಚಳ್ಳಕೆರೆ ನಗರದ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಆಯೋಜಿಸಿದ್ದ ಮಹಾತ್ಮಗಾಂಧೀಜಿ ಮತ್ತು ಲಾಲ್‌ಬಹದ್ದೂರ್ ಶಾಸ್ತ್ರಿಯವರ ಜನ್ಮದಿನಾಚರಣೆಯನ್ನು ಸ್ವಚ್ಛತಾ ಕಾರ್ಯ ಮಾಡುವ ಮೂಲಕ ಆಚರಿಸಿದರು.

---

# ಅಹಿಂಸೆ ಸಂದೇಶವನ್ನು ವಿಶ್ವಕ್ಕೆಸಾರಿದ ಭಾರತದ ಪೀತಾಮಹ ಮಹತ್ಮಗಾಂಧಿ



» ಹೊಳಲ್ಕೆರೆ

ಅಹಿಂಸೆ ಸಂದೇಶವನ್ನು ವಿಶ್ವಸಾರಿದ ಭಾರತದ ಪೀತಾಮಹ ಮಹತ್ಮಗಾಂಧಿ ಚಿಂತನೆಗಳನ್ನು ಸಕಾರಗೊಳಿಸಲು ಸರಕಾರಗಳು ಗಾಂಧಿಜೀ ಹೆಸರಲ್ಲಿ ಸಾಕಷ್ಟು ಕಾರ್ಯಕ್ರಮಗಳನ್ನು ಅನುಷ್ಠಾನಕ್ಕೆ ತರಬೇಕೆಂದು ವಕೀಲ ಎಸ್.ವೇದಮೂರ್ತಿ ಅಭಿಪ್ರಾಯಪಟ್ಟರು.

ಅವರು ಪತ್ರಕರ್ತರ ಭವನದಲ್ಲಿ ತಾಲೂಕು ಕಾರ್ಯನಿರತ ಪತ್ರಕರ್ತರು ಹಾಗೂ ಪತ್ರಿಕಾ ವಿತರಕರು ಹಮ್ಮಿಕೊಂಡಿದ್ದ ಮಹತ್ಮ ಗಾಂಧಿಜೀ ಹಾಗೂ ಲಾಲ್ ಬಹದ್ದೂರ್ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸತ್ಯಕ್ಕಾಗಿ ಹೋರಾಟ ಕೈಗೊಂಡ ಗಾಂಧಿಜಿ ದೇಶವನ್ನು ಅಂಗ್ಲರ ದಾಸ್ಯದಿಂದ ಬಿಡುಗಡೆಗೊಳಿಸಿ ಪ್ರಜಾಪ್ರಭುತ್ವ ಸಿದ್ಧಾಂತದ ಭಾರತ ನಿರ್ಮಾಣಕ್ಕೆ ಮಹತ್ವದ ಕೊಡುಗೆ ನೀಡಿದ್ದಾರೆ. ಜಾತಿ ಧರ್ಮ ಎನ್ನದೆ ಎಲ್ಲರನ್ನು ಒಟ್ಟುಗೊಡಿಸಿಕೊಂಡು ಭಾರತ ದೇಶದ ಸ್ವಾತಂತ್ರ್ಯಕ್ಕಾಗಿ ಶ್ರಮಿಸಿದ್ದಾರೆ. ಅವರ ಅದರ್ಶಗಳು ಎಂದಿಗೂ ಚಿರಸ್ಥಾಯಿ ಎಂದರು.

ಸ್ವಚ್ಛ ಭಾರತ ಯೋಜನೆ ಕೇವಲ ರಸ್ತೆ, ಚರಂಡಿ ಸ್ವಚ್ಛತೆಯಲ್ಲ. ದೇಶದಲ್ಲಿರುವ ಭ್ರಷ್ಟಚಾರ ಸ್ವಚ್ಛವಾಗಬೇಕು. ಭಯೋತ್ಪದನೆ ನಿರ್ಮೂಲನೆ, ಜಾತಿ ಮತ ಪಥ ಧರ್ಮ ತಾರತಮ್ಯ ನಿವಾರಣೆಯಾಗಬೇಕು. ದೇಶ ನಿವಾಸಿಗಳಿಗೆ ಸಮಾನ ಸೌಲಭ್ಯಗಳು ಸಿಕ್ಕಬೇಕು. ಬಡತನ ನಿರುದ್ಯೋಗ ನಿವಾರಿಸಿ, ಕೃಷಿ, ಕೈಗಾರಿಕೆ, ತಂತ್ರಜ್ಞಾನ, ಜಾಗತಿಕ ಮಟ್ಟದಲ್ಲಿ ಬೆಳೆದು ನಿಲ್ಲಬೇಕು. ಮಹತ್ಮ ಗಾಂಧಿ ದೇಶಕ್ಕೆ ತಂದುಕೊಟ್ಟು ಸ್ವಾತಂತ್ರ್ಯಕ್ಕೆ ಒಂದು ಆರ್ಥಬರಲಿದೆ ಎಂದರು.

---

## ಪ್ರಮುಖ ಸುದ್ದಿ

# ಗಾಂದಿ ತತ್ವಗಳು ಇಂದಿಗೂ ಪ್ರಸ್ತುತ: ರಾಜೇಶ್ವರಿ ಹೆಗಡೆ

» ದಾವಣಗೆರೆ



ಅಹಿಂಸೆ ಮತ್ತು ಸತ್ಯಾಗ್ರಹ, ಅಸಹಕಾರ ಚಳುವಳಿಗಳ ಮೂಲಕ ಭಾರತಕ್ಕೆ ಸ್ವಾತಂತ್ರ್ಯ ತಂದು ಕೊಟ್ಟ ಗಾಂಧಿಜಿಯವರ ತತ್ವಗಳು ಇಂದಿಗೂ ಪ್ರಸ್ತುತ ಎಂದು ದಾವಣಗೆರೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್. ಹೆಗಡೆ ತಿಳಿಸಿದರು.

ಬುಧವಾರ ಜಿಲ್ಲಾ ನ್ಯಾಯಾಲಯಗಳ ಆವರಣದಲ್ಲಿರಾಷ್ಟ್ರಪಿತಮಹಾತ್ಮಗಾಂಧಿಜೀ ಜಯಂತಿ ಅಂಗವಾಗಿ ಆಯೋಜಿಸಲಾಗಿದ್ದ ಸ್ವಚ್ಛತಾ ಸೇವಾ ದಿವಸ್ ನಿಮಿತ್ತ ಶ್ರಮದಾನ ನಡೆಸಿ, ಮಾನವ ಸರಪಳಿ, ಚಿಂತನ ಮಂಥನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ನಮ್ಮ ಜೀವನದಲ್ಲಿ ಸತ್ಯ ಮತ್ತು ಅಹಿಂಸಾ ತತ್ವಗಳನ್ನು ಪಾಲಿಸುವ ಮೂಲಕ ನ್ಯಾಯ ಮತ್ತು ಸೌಹಾರ್ದತೆ ನೆಲೆಸುವ ಜಗತ್ತು ನಿರ್ಮಾಣಕ್ಕೆ ಶ್ರಮಿಸೋಣ. ಸರಳತೆ ಮತ್ತು ಸತ್ಯದ ಮಹತ್ವನ್ನು ಕಲಿಸಿದ ಮಹಾತ್ಮಾ ಗಾಂಧಿಜಿಯವರ ಆದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಅವರ ತತ್ವಗಳಿಗೆ ಬದ್ಧರಾಗಿರೋಣ. ವೈಯಕ್ತಿಕ ಯೋಗಕ್ಷೇಮ ಮತ್ತು ರಾಷ್ಟ್ರೀಯ ಪ್ರಗತಿಗೆ ಎರಡಕ್ಕೂ ಸ್ವಚ್ಛತೆ ಅತ್ಯಗತ್ಯ ಎಂದು ಗಾಂಧಿಜೀ ಬಲವಾಗಿ ನಂಬಿದ್ದರು ಎಂದು ಹೇಳಿದರು. 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಎಂ.ಹೆಚ್.ಅಣ್ಣಯ್ಯನವರ ಮಾತನಾಡಿ, ಗಾಂಧಿಜೀಯವರು ಹಲವಾರು ಚಳುವಳಿಗಳ ಮೂಲಕ ಶಾಂತಿಯುತ ಹೋರಾಟ ಕಟ್ಟಿ, ಶಾಂತಿ ಮತ್ತು ಅಹಿಂಸಾ ಮಾರ್ಗಗಳ ಮೂಲಕ ಸ್ವಾತಂತ್ರ್ಯ ಸಾಧಿಸಿದ್ದು, ಜಗತ್ತಿನ ಇತಿಹಾಸವಾಗಿದೆ ಎಂದು ತಿಳಿಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾ ನ್ಯಾಯಾಂಗದ ಮುಖ್ಯ ಆಡಳಿತಾಧಿಕಾರಿ ಬಿ.ಶ್ರೀನಿವಾಸ್, ಗಾಂಧಿಜೀ ತಮ್ಮ ಬದುಕು ಹಾಗೂ ಚಿಂತನೆಗಳಲ್ಲಿ ನುಸುಳಿದ ಹಲವು ಬಗೆಯ ವೈರುದ್ಧಗಳನ್ನು ಪರೀಕ್ಷೆಗೆ ಒಳಪಡಿಸಿಕೊಂಡ ಸ್ವಪರೀಕ್ಷಕ. ಅಳವಾಗಿ ಚಿಂತಿಸಿ ಪ್ರಯೋಗ ಮಾಡಿದ ಪ್ರಯೋಗ ಶೀಲ. ಒಟ್ಟಾರೆ ಉವರನ್ನು ಬಣ್ಣಿಸಲು ಹೊರಟರೆ ಅವರ ವ್ಯಕ್ತಿತ್ವದ ಹಲವು ಮುಖಗಳ ಪರಿಚಯವಾಗುತ್ತದೆ ಎಂದು ಹೇಳಿದರು. ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಎಚ್.ಅರುಣ್‌ಕುಮಾರ್ ಮಾತನಾಡಿ, ಕಾನೂನು ಕಲಿತು ಸ್ಪಷ್ಟವಾಗಿ ಯೋಚಿಸಿದ ನ್ಯಾಯಯುತ ಹೋರಾಟವನ್ನು ತರ್ಕಬದ್ಧವಾಗಿ ಕಟ್ಟಿದ ಸತ್ಯ ಪ್ರತಿಪಾದನೆ ಮಾಡಿದ ಗಾಂಧಿಜೀ ನ್ಯಾಯವಾದಿಯಾಗಿ, ಪತ್ರಕರ್ತರಾಗಿ, ಬರಹಗಾರರಾಗಿ, ತತ್ವಜ್ಞಾನಿಯಾಗಿ ನಮ್ಮೊಡನೆ ಇದ್ದಾರೆ. ಇತಿಹಾಸದಲ್ಲಿ ಮೊಟ್ಟಮೊದಲ ಬಾರಿಗೆ ಒಂದು ದೇಶದ ಸ್ವಾತಂತ್ರ್ಯ ಹೋರಾಟವನ್ನು ಸಾಮಾಜಿಕ ಪರಿವರ್ತನೆಯ ಹೋರಾಟವನ್ನಾಗಿ ಪರಿವರ್ತಿಸಿ, ದೇಶದ ಮೂಲ ಕಾಯಿಲೆಗಳಾದ ಅಸ್ಪೃಶ್ಯತೆ, ಅಸಮಾನತೆ, ಮೂಲಭೂತವಾದ,ಕೋಮುವಾದಗಳನ್ನು ನಿವಾರಣೆ ಮಾಡಲು ಶ್ರಮಿಸಿದರು ಎಂದರು. ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮಾ. ಕರೆಣ್ಣವರ್, ಜಿಲ್ಲಾ ನ್ಯಾಯಾಧೀಶರಾದ ಆರ್.ಎನ್.ಪ್ರವೀಣ್‌ಕುಮಾರ್, ಶ್ರೀರಾಮ ನಾರಾಯಣಹೆಗಡೆ,ಪ್ರಧಾನಹಿರಿಯಸಿವಿಲ್ ನ್ಯಾಯಾಧೀಶರಾದ ಟಿ.ಎಂ.ನಿವೇದಿತಾ, ನ್ಯಾಯಾಧೀಶರಾದ ರೇಷ್ಮಾ, ನಾಗೇಶ್, ಅಮರ್, ಗಾಯತ್ರಿ, ಮಲ್ಲಿಕಾರ್ಜುನ್, ಪ್ರಶಾಂತ್, ಸಿದ್ದರಾಜ್, ನಾಝಿಯಾ ಕೌಸರ್, ವಕೀಲರ ಸಂಘದ ಕಾರ್ಯದರ್ಶಿ ಎಸ್.ಬಸವರಾಜ್, ಸಹಕಾರ್ಯದರ್ಶಿ ಎ.ಎಸ್.ಮಂಜುನಾಥ್, ಕಾರ್ಯಕಾರಿ ಸಮಿತಿ ಸದಸ್ಯರಾದ ಕೆ.ಎಂ.ನೀಲಕಂಠಯ್ಯ, ಆರ್.ಭಾಗ್ಯಲಕ್ಷ್ಮಿ, ಎಂ.ರಾಘವೇಂದ್ರ ಸೇರಿದಂತೆ ನ್ಯಾಯಾಲಯದ ಸಿಬ್ಬಂದಿಗಳು ಇದ್ದರು.

ಫಾಸ್ಟ್ ನ್ಯೂಸ್

## ಪ್ರಕೃತಿ ಆಯುರ್ವೇದಿಕ್ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಗಾಂಧಿ ಜಯಂತಿ ಆಚರಣೆ.




» **ಚಿತ್ರದುರ್ಗ**

ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಪ್ರಕೃತಿ ಆಯುರ್ವೇದಿಕ್ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ಗಾಂಧಿ ಜಯಂತಿಯನ್ನು ಆಚರಿಸಲಾಯಿತು.ಪ್ರಕೃತಿ ಆಯುರ್ವೇದಿಕ್ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆಯ ಪ್ರಾಂಶುಪಾಲರಾದ ಡಾ.ನವಾಜ್ ಮಾತನಾಡಿ ಸತ್ಯ, ಅಹಿಂಸೆ ಗಾಂಧಿಜಿಯ ಅಸ್ತ್ರವಾಗಿತ್ತು. ದೇಶದ ಸ್ವಾತಂತ್ರಕ್ಕಾಗಿ ಹೋರಾಡಿದ ಗಾಂಧಿಜಿಯವರ ಆದರ್ಶಗಳನ್ನು ಪ್ರತಿಯೊಬ್ಬರು ಮೈಗೂಡಿಸಿಕೊಳ್ಳಬೇಕೆಂದು ಹೇಳಿದರು. ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಶೈಕ್ಷಣಿಕ ಸಂಯೋಜಕ ರಾಜು ಆರ್.ಎಸ್. ಇನ್ನು ಮುಂತಾದವರು ಗಾಂಧಿ ಜಯಂತಿಯಲ್ಲಿ ಪಾಲ್ಗೊಂಡಿದ್ದರು.

## ಮಹಿಳೆಯರು ಧಾರ್ಮಿಕ ಚಿಂತನೆಯೊಂದಿಗೆ ವೈಜ್ಞಾನಿಕ ಚಿಂತನೆಯನ್ನು ಮಕ್ಕಳಿಗೆ ಬೆಳೆಸಬೇಕು



» **ಹೊಸದುರ್ಗ**

ಮುಂದಿನ ಪೀಳಗೆಗೆ ಧರ್ಮ ಮತ್ತು ಧಾರ್ಮಿಕತೆ ಉಳಿಯಬೇಕು ಇಂದಿನ ಯುವ ಪೀಳಿಗೆಯಲ್ಲಿ ಧರ್ಮ ಮತ್ತು ಧಾರ್ಮಿಕತೆ ಎಂಬುದು ಮರೀಚಿಕೆಯಾಗಿ ಹೊಗುತ್ತಿದೆ,ಇಂದಿನ ದಿನ ಮಾನಗಳಲ್ಲಿ ಮಹಿಳೆಯರು ಧಾರ್ಮಿಕ ಚಿಂತನೆಯೊಂದಿಗೆ ವೈಜ್ಞಾನಿಕ ಚಿಂತನೆಯನ್ನು ಮಕ್ಕಳಿಗೆ ಬೆಳೆಸಬೇಕು ಎಂದು ಶ್ರೀ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಪ್ರಾದೇಶಿಕ ನಿರ್ದೇಶಕಿ ಶ್ರೀಮತಿ ಗೀತಾ.ಬಿ ತಿಳಿಸಿದರು.

ತಾಲ್ಲೂಕಿನ ಕೆಲ್ಲೋಡು ಗ್ರಾಮದ ಆಂಜನೇಯ ಸ್ವಾಮಿ ದೇವಾಸ್ಥಾನ ಆವರಣದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆ ಬಿ.ಸಿ.ಟ್ರಸ್ಟ್ (ರಿ) ವತಿಯಿಂದ ಮಂಗಳವಾರ ಹಮ್ಮಿಕೊಂಡಿದ್ದ ಸಾಮೂಹಿಕ ಮಹಾಲಕ್ಷ್ಮೀ ಪೂಜೆ ಹಾಗೂ ಮಹಿಳಾ ಜಾಗೃತಿ ಅರಿವು ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.ಮಹಿಳೆಯರು ಪಾರಂಪರಗತವಾಗಿರುವ ಪೂಜೆ, ಭಜನೆ,ಧ್ಯಾನ, ಯೋಗವನ್ನು ನಮ್ಮ ಹಿರಿಯರು ಧಾರ್ಮಿಕ ಪ್ರಜ್ಞೆಯನ್ನು ಇಟ್ಟುಕೊಂಡು ಮಾಡಿರುತ್ತಾರೆ ಎಂದರು.ಆದರೆ ಇತ್ತೀಚಿನ ದಿನಗಳಲ್ಲಿ ಯುವ ಪೀಳಿಗೆಗೆ ಹೆಚ್ಚು ತಾಯಂದಿರು ಅರಿವನ್ನು ಮೂಡಿಸಿದಾಗ ವೈಜ್ಞಾನಿಕವಾಗಿ ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳುವ ಜೊತೆಗೆ ಸಮಾಜದ ಸ್ವಾಸ್ಥ್ಯವನ್ನು ರಕ್ಷಿಸಿದಂತಾಗುತ್ತದೆ. ಆಧುನಿಕ ಸಾಮಾಜಿಕ ಜಾಲತಾಣಗಳಲ್ಲಿ ಮಹಿಳೆಯರು, ಮಕ್ಕಳು ಅತಿ ಹೆಚ್ಚು ಸಮಯ ಕಳೆಯುತ್ತಿರುವುದರಿಂದ ಕೌಟುಂಬಿಕ ಕಲಹಗಳು ಸಂಬಂಧಿಸಿದಂತೆ ಆರೋಗ್ಯದ ಸಮಸ್ಯೆಗಳು ಬರುತ್ತಿದ್ದು ಇದನ್ನು ತಡೆಗಟ್ಟಲು ಏಕೈಕ ಮಾರ್ಗ ತನ್ನ ಮನೆಯಲ್ಲಿ ಕುಟುಂಬದ ಸ್ವಾಸ್ಥ್ಯವನ್ನು ರಕ್ಷಣೆ ಮಾಡುವ ಜವಾಬ್ದಾರಿ ವಹಿಸಿಕೊಳ್ಳಬೇಕು ಎಂದು ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀಮತಿ ಶಿಲ್ಪಾ ಮಧುಸೂಧನ್ ವಹಿಸಿದ್ದರು.ಈ ಕಾರ್ಯಕ್ರಮದಲ್ಲಿ ಸಮಾಜ ಸೇವಕ ಅರುಣ್ ಗೋವಿಂದಪ್ಪ, ಆಗ್ರೋ ಶಿವಣ್ಣ, ಸಮಾಜ ಸೇವಕರು, ಬೋರೇಶ್ ರೈತ ಸಂಘದ ಅಧ್ಯಕ್ಷರು, ಹಾಗೂ ಕ್ಷೇತ್ರ ಯೋಜನಾಧಿಕಾರಿ ಶಿವಣ್ಣ.ಎಸ್ ಪ್ರಾಸ್ತವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ತುಕರಾಮ್, ರಮೇಶ್, ಕಮಲ, ಲಿಖಿತ್ ಹಾಗೂ ಪೂಜಾ ಸಾವಿರಾರು ಮಹಿಳೆಯರು ಭಾಗವಹಿಸಿದ್ದರು.

## ಹೊಲಿಗೆ, ವಿಡಿಯೋಗ್ರಫಿ ತರಬೇತಿಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಪರಿಶಿಷ್ಟ ಜಾತಿ ಉಪಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿಯ ಯುವ ಜನರಿಗಾಗಿ, ಯುವ ಜನರನ್ನು ಸ್ವಾವಲಂಬಿಯಾಗಲು ಉತ್ತೇಜಿಸುವ ದೃಷ್ಠಿಯಿಂದ ಹೊಲಿಗೆ ತರಬೇತಿ ಮತ್ತು ವಿಡಿಯೋಗ್ರಾಫಿ ತರಬೇತಿ ಶಿಬಿರ ಹಮ್ಮಿಕೊಳ್ಳಲಾಗಿದೆ. ಈ ಸಂಬಂಧ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಅಕ್ಟೋಬರ್ 31 ಕೊನೆಯ ದಿನವಾಗಿದೆ. ವಿಡಿಯೋಗ್ರಾಫಿ ತರಬೇತಿ ಶಿಬಿರ 2024ರ ನವೆಂಬರ್ 15 ರಿಂದ 26ರ ವರೆಗೆ 12 ದಿನಗಳ ಕಾಲ ಬೆಂಗಳೂರಿನ ಕೋರಮಂಗಲ ಒಳಾಂಗಣ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

# ಭದ್ರಾಗೆ ಒಂದುವರೆ ತಿಂಗಳಲ್ಲಿ ಕೇಂದ್ರದ ಅನುದಾನ

» **ಚಿತ್ರದುರ್ಗ**

ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಘೋಷಿಸಿರುವ 5300 ಕೋಟಿ ರು ಅನುದಾನದಲ್ಲಿ ಇನ್ನೊಂದುವರೆ ತಿಂಗಳಲ್ಲಿ ಮೊದಲ ಕಂತು ಬಿಡುಗಡೆಯಾಗಲಿದೆ ಎಂದು ಕೇಂದ್ರ ಜಲಶಕ್ತಿ ಸಚಿವ ವಿ.ಸೋಮಣ್ಣ ಹೇಳಿದರು.

ಇಲ್ಲಿನ ಪ್ರವಾಸಿ ಮಂದಿರದಲ್ಲಿ ಬುಧವಾರ ಜಿಲ್ಲಾ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು ಅನುದಾನ ಬಿಡುಗಡೆಗೆ ಸಂಬಂಧಿಸಿದಂತೆ ಹಣಕಾಸು ಸಚಿವೆ ನಿರ್ಮಲ ಸೀತರಾಮನ್ ಜೊತೆ ಚರ್ಚಿಸಲಾಗಿದೆ. ಮೂರು ಕಂತುಗಳಲ್ಲಿ ಹಣ ನೀಡುವ ಭರವಸೆಯ ಅವರು ನೀಡಿದ್ದಾರೆ. ರಾಜ್ಯ ಸರ್ಕಾರಕ್ಕೆ ಕೆಲ ತಾಂತ್ರಿಕ ಮಾಹಿತಿ ಪೂರೈಕೆ ಮಾಡುವಂತೆ ಸೂಚಿಸಲಾಗಿದೆ. ಅವರಿಂದ ಮಾಹಿತಿ ಪೂರೈಕೆಯಾದ ತಕ್ಷಣವೇ ಕೇಂದ್ರದ ಅನುದಾನ ಲಭ್ಯವಾಗಲಿದೆ. ಒಂದುವರೆ ತಿಂಗಳಲ್ಲಿ ಮೊದಲ ಕಂತು ಬಿಡುಗಡೆಯಾಗಲಿದೆ ಎಂದು ಸೋಮಣ್ಣ ಹೇಳಿದರು.ಚಿತ್ರದುರ್ಗ ಜಿಲ್ಲೆಯ ಬರ ಪರಿಸ್ಥಿತಿ ನಮಗೆ ಗೊತ್ತಿದೆ. ವಾಣಿ ವಿಲಾಸ ಸಾಗರ ಹೊರತು ಪಡಿಸಿ ಇತರೆ ಜಲಾಶಯ ಮೂಲಗಳಿಲ್ಲ. ಅದೂ ಕೂಡಾ ತುಂಬುವುದು ಕಷ್ಟವಾಗಿತ್ತು. ಭದ್ರಾ ಮೇಲ್ದಂಡೆಯಡಿ ಭರ್ತಿ ಮಾಡಲಾಗುತ್ತಿದೆ. ನಾನೂ ಕೂಡಾ ರೈತನ ಮಗನಾಗಿದ್ದು ಕೇಂದ್ರದ ಅನುದಾನ ಬಿಡುಗಡೆಗೆ ಪ್ರಾಮಾಣಿಕ ಪ್ರಯತ್ನ ಮಾಡುವೆ. ಸಂಸದ ಗೋವಿಂದ ಕಾರಜೋಳ ಅವರು ನೀರಾವರಿ ವಿಚಾರದಲ್ಲಿ ತಜ್ಞರಷ್ಟೇ ಅನುಭವವಿದೆ. ಅವರ ಮುಂದಾಳತ್ವದಲ್ಲಿ ಅನುದಾನ ಹರಿದು ಬರಲಿದೆ ಎಂದರು.

ಇದಕ್ಕೂ ಮೊದಲು ಮನವಿ ಸಲ್ಲಿಸಿ ಮಾತನಾಡಿದ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಕಾರ್ಯಾಧ್ಯಕ್ಷ ಬಿ.ಎ.ಲಿಂಗಾರೆಡ್ಡಿ, ಭದ್ರಾ ಮೇಲ್ದಂಡೆ ಯೋಜನೆ ಕಾಮಗಾರಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಅಸಹಕಾರ ಧೋರಣೆಯಿಂದಾಗಿ ಕುಂಟುತ್ತಾ ಸಾಗಿದ್ದು ಈ ಭಾಗದ ಅನ್ನದಾತರ ಆಕ್ರೋಶಕ್ಕೆ ಕಾರಣವಾಗಿದೆ. ಕೇಂದ್ರ ಸರ್ಕಾರದ ಅನುದಾನ ಕಾಯ್ದುಕೊಂಡು ರಾಜ್ಯ ಕೈ ಚೆಲ್ಲಿ ಕುಳಿತಿದೆ . ಕೇಂದ್ರ ಸರ್ಕಾರ ಕೂಡಾ ಘೋಷಿತ 5300 ಕೋಟಿ ರು ಅನುದಾನ ಬಿಡುಗಡೆ ಮಾಡುವಲ್ಲಿ ಉದಾಸೀನ ತೋರಿದೆ ಎಂದು ದೂರಿದರು.

ಕೇಂದ್ರ ಸರ್ಕಾರದಲ್ಲಿ ಸೋಮಣ್ಣ ಜಲಶಕ್ತಿ ರಾಜ್ಯ ಸಚಿವರಾಗಿ ನಿಯೋಜನೆಗೊಳ್ಳುತ್ತಿದ್ದಂತೆ ಈ ಭಾಗದ ರೈತರಲ್ಲಿ ಆಶಾದಾಯಕ ಭಾವನೆ ಮೂಡಿತ್ತು. ಭದ್ರಾ ಮೇಲ್ದಂಡೆಗೆ ಕೇಂದ್ರ ತಕ್ಷಣವೇ ಅನುದಾನ ಬಿಡುಗಡೆ ಮಾಡುತ್ತದೆ,ಆಪದ್ಬಾಂಧವರಾಗಿ ಸೋಮಣ್ಣ ಬಂದಿರುವುದು ನಮ್ಮ ಅದೃಷ್ಟವೆಂದೇ ರೈತಾಪಿ ಸಮುದಾಯ ನಂಬಿತ್ತು. ಆದರೆ ಅದು ಹುಸಿಯಾದಂತೆ ಕಾಣಿಸುತ್ತಿದೆ ಎಂದುಣಟಿಜಜಜುಟಿಜಜ ನೇರವಾಗಿ ಆರೋಪಿಸಿದರು.

ಭದ್ರಾ ಮೇಲ್ದಂಡೆ ಯೋಜನೆಯಡಿ ತುಮಕೂರು ಶಾಖಾ ಕಾಲುವೆ ಮೂಲಕ 85 ಸಾವಿರ ಹೆಕ್ಟೇರು ಪ್ರದೇಶಕ್ಕೆ ನೀರುಣಿಸಲಾಗುತ್ತಿದೆ. ಸುಮಾರು 131 ಕೆರೆಗಳಿಗೆ ನೀರು ತುಂಬಿಸಲಾಗುತ್ತಿದೆ. ಯೋಜನಾ ವ್ಯಾಪ್ತಿಗೆ ತುಮಕೂರು ಜಿಲ್ಲೆಯ ಶಿರಾ, ಚಿಕ್ಕನಾಯಕನಹಳ್ಳಿ, ಪಾವಗಡ ತಾಲೂಕು ಸೇರಿದೆ.ಹಾಗಾಗಿ ಭದ್ರಾ ಕಾಮಗಾರಿ ಪೂರ್ಣಗೊಳಿಸುವಲ್ಲಿ ಸಚಿವರಾಗಿಯಷ್ಟೇ ಅಲ್ಲ ಸಂಸದರಾಗಿಯೂ ತಾವು ತಮ್ಮ ಕರ್ತವ್ಯ ನಿಭಾಯಿಸಬೇಕಾಗಿದೆ.

ಭದ್ರಾ ಮೇಲ್ದಂಡೆ ರಾಷ್ಟ್ರೀಯ ಯೋಜನೆಯಾಗುವ ನಿಟ್ಟಿನಲ್ಲಿ ದೆಹಲಿಗೆ ಕಡತ ಹೊತ್ತೊಯ್ದು ಎಲ್ಲ ಕ್ಲಿಯರೆನ್ಸ್ ಮಾಡಿಸಿದ ಹಿಂದಿನ ಬಿಜೆಪಿ ಸರ್ಕಾರದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹಾಗೂ ಜಲಸಂಪನ್ಮೂಲ ಸಚಿವ ಗೋವಿಂದ ಕಾರಜೋಳ ಹಾಲಿ ಸಂಸದರಾಗಿ ಲೋಕಸಭೆ ಪ್ರವೇಶಿಸಿದ್ದಾರೆ. ಕರ್ನಾಟಕದ ಪರವಾಗಿ ಬಹುದೊಡ್ಡ ಶಕ್ತಿಯೇ ಸಂಸತ್ ನಲ್ಲಿ ಪಾಲು ಪಡೆದಿದೆ. ಆದರೆ ಈ ನೆಲದ ಸ್ವಾಭಿಮಾನ, ರೈತರ ಭವಿಷ್ಯದ ಬದುಕಿನ ಪ್ರಶ್ನೆಯಾಗಿರುವ ಭದ್ರಾ ಮೇಲ್ದಂಡೆ ವಿಚಾರದಲ್ಲಿ ಜನ ಪ್ರತಿನಿಧಿಗಳು ಏರಿದ ದನಿಯಲ್ಲಿ ಕೇಂದ್ರದ ಮುಂದೆ ದನಿ ಎತ್ತಿ ಅನುದಾನ ತರುವಲ್ಲಿ ವಿಫಲರಾಗಿರುವುದು ನೋವಿನ ಸಂಗತಿ ಎಂದರು.

ಭದ್ರಾ ಮೇಲ್ದಂಡೆಗೆ 5300 ಕೋಟಿ ಅನುದಾನದ ನೆರವನ್ನು ಪ್ರಧಾನಿ ನರೇಂದ್ರ ಮೋದಿ ಅವರು ಸ್ವತಹ ಚಿತ್ರದುರ್ಗ ನೆಲದಲ್ಲಿಯೇ ನಿಂತು ಘೋಷಣೆ ಮಾಡಿದ್ದರು. 2023-24 ಸಾಲಿನ ಬಜೆಟ್ ನಲ್ಲಿ ಇದು ನಮೂದಾಗಿದೆ. ಬಿಜೆಪಿಯವರೇ ಕೇಂದ್ರದ ಮುಂದೆ ಭದ್ರಾ ಮೇಲ್ದಂಡೆ ಕಡತ ಒಯ್ದು ಹೊಸ ಕೂಸು ಹುಟ್ಟಿಸಿ, ರಾಷ್ಟ್ರೀಯ ಯೋಜನೆ ನಾಮಕರಣ ಮಾಡಿ ಕುಲಾವಿ ತೊಡಿಸಿದ್ದರು. ಈ ಕೂಸನ್ನು ಲಾಲನೆ ಪಾಲನೆ ಮಾಡುವುದ ಬಿಟ್ಟು ಕತ್ತು ಹಿಸುಕಲು ಮುಂದಾಗುವುದು ಎಷ್ಟರ ಮಟ್ಟಿಗೆ ಸರಿ. ತಕ್ಷಣವೇ ಪ್ರಧಾನ ಮಂತ್ರಿ ನರೇಂದ್ರ ಮೋದಿ ಹಾಗೂ ಹಣಕಾಸು ಸಚಿವೆ ನಿರ್ಮಲ ಸೀತರಾಮನ್ ಮುಂದೆ ಚರ್ಚಿಸಿ 5300 ಕೋಟಿ ರು ಅನುದಾನ ಬಿಡುಗಡೆ ಮಾಡಿಸಿ ತಮ್ಮ ಪಾಲಿನ ಜವಾಬ್ದಾರಿ ಮೆರೆಯಬೇಕೆಂದು ಸಚಿವ ಸೋಮಣ್ಣ ಅವರಿಗೆ ಸಲ್ಲಿಸಲಾದ ಮನವಿಯಲ್ಲಿ ಆಗ್ರಹಿಸಲಾಗಿದೆ.

ಸಂಸದ ಗೋವಿಂದ ಕಾರಜೋಳ, ಶಾಸಕರಾದ ಎಂ.ಚಂದ್ರಪ್ಪ, ಕೆ.ಎಸ್.ನವೀನ್, ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಪ್ರಧಾನ ಕಾರ್ಯದರ್ಶಿ ಕೆ.ಆರ್.ದಯಾನಂದ, ಸಂಚಾಲಕ ಚಿಕ್ಕಪ್ಪನಹಳ್ಳಿ ಷಣ್ಮುಖ, ರೈತ ಸಂಘದ ರಾಜ್ಯ ಉಪಾಧ್ಯಕ್ಷೆ ಕೆ.ಪಿ.ಭೂತಯ್ಯ, ಜಿಲ್ಲಾಧ್ಯಕ್ಷ ಹಂಪಯ್ಯನಮಾಳಿಗೆ ಧನಂಜಯ, ಕಾರ್ಯಾಧ್ಯಕ್ಷ ಕೆ.ಸಿ.ಹೊರಕೇರಪ್ಪ, ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ಮಾಜಿ ಅಧ್ಯಕ್ಷಬಸ್ತಿಹಳ್ಳಿ ಸುರೇಶ್ ಬಾಬು, ಸರ್ವೋದಯ ಕರ್ನಾಟಕದ ಜಿಲ್ಲಾಧ್ಯಕ್ಷ ಜೆ.ಯಾದವರೆಡ್ಡಿ, ರೈತ ಸಂಘದ ಹುಣಿಸೆಕಟ್ಟೆ ಕಾಂತರಾಜ್, ಸಜ್ಜನಕೆರೆ ರೇವಣ್ಣ, ಓಂಕಾರಪ್ಪ, ಹುಣಿಸೆಕಟ್ಟೆ ಮಹಂತೇಶ್,ಕೆಂಚಪ್ಪ ಕಳ್ಳಿರೊಪ್ಪ, ಜೆಡಿಎಸ್ ಜಿಲ್ಲಾ ಕಾರ್ಯಾಧ್ಯಕ್ಷ ಜಿ.ಬಿ.ಶೇಖರ್,ಲಿಂಗಾವರಟ್ಟಿ ಕುಬೇರರೆಡ್ಡಿ, ಬಾಳೆಕಾಯಿ ತಿಪ್ಪೇಸ್ವಾಮಿ, ಡಿ.ಎಸ್. ಹಳ್ಳಿ ಕೃಷ್ಣಾರೆಡ್ಡಿ, ಲಕ್ಷ್ಮಣರೆಡ್ಡಿ,ನಗರಸಭೆ ಮಾಜಿ ಸದಸ್ಯ ಜಿ.ಎನ್.ಲಿಂಗರಾಜ್, ಅಪ್ಪಣ್ಣರೆಡ್ಡಿ,ಲಕ್ಷ್ಮಿನಾರಾಯಣರೆಡ್ಡಿ, ರಜನಿ ಶಂಕರ್ ಈ ವೇಳೆ ಉಪಸ್ಥಿತರಿದ್ದರು.



# ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಗಾಂಧಿ ಮತ್ತು ಲಾಲ್‌ಬಹದ್ದೂರ್‌ಶಾಸ್ತ್ರಿ ಜಯಂತಿ ಆಚರಣೆ

» **ಚಿತ್ರದುರ್ಗ**

ಸತ್ಯ ಮತ್ತು ಅಹಿಂಸೆಯ ಮೂಲಕ ಮಹಾತ್ಮಗಾಂಧಿ ಬ್ರಿಟೀಷರ ವಿರುದ್ದ ಹೋರಾಡಿ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟರೆಂದು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿದರು.

ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಬುಧವಾರ ಮಹಾತ್ಮಗಾಂಧಿಜಿ ಹಾಗೂ ಲಾಲ್‌ಬಹದ್ದೂರ್‌ಶಾಸ್ತ್ರಿಯವರ ಜಯಂತಿಯಲ್ಲಿ ಇಬ್ಬರು ಮಹನೀಯರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು.

ಸತ್ಯಮೇವ ಜಯತೆ ಎಂಬುದು ಮಹಾತ್ಮಗಾಂಧಿಯ ಧ್ಯೇಯವಾಗಿತ್ತು. ಲಾಲ್‌ಬಹದ್ದೂರ್‌ಶಾಸ್ತ್ರಿ ಹಾಗೂ ಗಾಂಧಿಜಿಯವರ ಆದರ್ಶಗಳನ್ನು ಎಲ್ಲರೂ ಮೈಗೂಡಿಸಿಕೊಂಡು ಅವರ ಮಾರ್ಗದರ್ಶನದಲ್ಲಿ ನಡೆಯೋಣ ಎಂದರು.

ಅಹಿಂದಾ ನಾಯಕ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಅಧಿಕಾರದಿಂದ ಕೆಳಗಿಳಿಸಲು ವಿರೋಧ ಪಕ್ಷದವರು ಷಡ್ಯಂತ್ರ ನಡೆಸುತ್ತಿದ್ದಾರೆ. ಮೂಡಾ ಹಗರಣದಲ್ಲಿ ಮುಖ್ಯಮಂತ್ರಿಗಳ ಪಾತ್ರವಿಲ್ಲದಿದ್ದರೂ ಮಾನಸಿಕವಾಗಿ ಕಿರುಕುಳ ನೀಡುತ್ತಿದ್ದಾರೆ. ಸತ್ಯಕ್ಕೆ ಸೋಲಿಲ್ಲ. ಮುಂದೊಂದು ದಿನ ಜಯ ಸಿಕ್ಕೆ ಸಿಗುತ್ತದೆ ಈಗ ಎದುರಾಗಿರುವ ಸಂಕಷ್ಟ ತಾತ್ಕಾಲಿಕವಷ್ಟೆ ಎಂದು ತಿಳಿಸಿದರು.

ಕೆ.ಪಿ.ಸಿ.ಸಿ. ಉಪಾಧ್ಯಕ್ಷ ಹಾಗೂ ಜಿಲ್ಲಾ ಉಸ್ತುವಾರಿ ಮುರಳಿಧರ ಹಾಲಪ್ಪ ಮಾತನಾಡಿ ದೇಶ ಸಂಕಷ್ಟದಲ್ಲಿದೆ. ನಿರುದ್ಯೋಗ ಸಮಸ್ಯೆ ತಾಂಡವವಾಡುತ್ತಿದೆ. ರೈತರ ಕರಾಳ ಕಾಯಿದೆ, ನೋಟಿ ಅಮಾನ್ಯೀಕರಣದಿಂದ ಹಿಡಿದು ಜಿ.ಎಸ್.ಟಿ.ವರೆಗೆ ದೇಶದ ಜನ ಸಾಕಷ್ಟು ತೊಂದರೆ ಅನುಭವಿಸುತ್ತಿದ್ದಾರೆ. ಪ್ರತಿ ವರ್ಷ ಎರಡು ಕೋಟಿ ಉದ್ಯೋಗ ನೀಡುವುದಾಗಿ ಯುವ ಸಮೂಹವನ್ನು ನಂಬಿಸಿ ಪ್ರಧಾನಿಯಾಗಿರುವ ನರೇಂದ್ರಮೋದಿ ಹತ್ತು ವರ್ಷಗಳಲ್ಲಿ ಒಂದು ಉದ್ಯೋಗವನ್ನು ಕೊಟ್ಟಿಲ್ಲ. ಗಾಂಧಿ ಮತ್ತು ಲಾಲ್‌ಬಹದ್ದೂರ್‌ಶಾಸ್ತ್ರಿ ಇವರುಗಳ ಹೋರಾಟವನ್ನು ಮುಂದುವರೆಸಿಕೊಂಡು ಹೋಗುವ ಮೂಲಕ ಕೋಮುವಾದಿ ಬಿಜೆಪಿ.ಯನ್ನು ತೊಲಗಿಸಿ ದೇಶ ಉಳಿಸಬೇಕಾಗಿದೆ ಎಂದು ಹೇಳಿದರು.ಕೆ.ಪಿ.ಸಿ.ಸಿ. ಪ್ರಧಾನ ಕಾರ್ಯದರ್ಶಿ ಚಿತ್ರದುರ್ಗ ಕ್ಷೇತ್ರದ ಉಸ್ತುವಾರಿ ರಾಮಕೃಷ್ಣಪ್ಪ, ಮಾಜಿ ಸಂಸದ ಬಿ.ಎನ್.ಚಂದ್ರಪ್ಪ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್ ಹಾಜರಿದ್ದರು.



## ಗಾಂಧಿ ಜಯಂತಿ ಅಂಗವಾಗಿ ನ್ಯಾಯಲಯದ ಆವರಣದಲ್ಲಿ ಸ್ವಚ್ಛತೆ



» **ದಾವಣಗೆರೆ**

ಜಿಲ್ಲಾ ನ್ಯಾಯಾಂಗ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ ಹಾಗೂ ಮಹಾನಗರ ಪಾಲಿಗೆ ಇವರುಗಳ ಸಂಯುಕ್ತಾಶ್ರಯದಲ್ಲಿ ಅಕ್ಟೋಬರ್ 2 ರಂದು ಜಿಲ್ಲಾ ನ್ಯಾಯಾಲಯಗಳ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ. ರಾಷ್ಟ್ರಪಿತ ಮಹಾತ್ಮ ಗಾಂಧಿ ಜಯಂತಿ ಕಾರ್ಯಕ್ರಮದಲ್ಲಿ ಗಾಂಧೀಜಿಯವರ ಭಾವಚಿತ್ರಕ್ಕೆ ಪುಷ್ಪ ನಮನ ನೇರೆವೆರಿಸಲಾಯಿತು. ಕಾರ್ಯಕ್ರಮದಲ್ಲಿ ಸ್ವಚ್ಛತಾ ಮಾನವ ಸರಪಳಿ ರೂಪಿಸಿ, ಗಾಂಧಿಯವರ ಬಗ್ಗೆ ಚಿಂತನ ಬಗ್ಗೆ ಭೋಧಿಸಿ ನಂತರ ಪೊರಕೆ ಹಿಡಿದು ಜಿಲ್ಲಾ ನ್ಯಾಯಾಲಯಗಳ ಆವರಣವನ್ನು ಸ್ವಚ್ಛಗೊಳಿಸಲಾಯಿತು. ಈ ಸಂಧರ್ಭದಲ್ಲಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾವೀರ್ ಮಾ.ಕರೆಣ್ಣವರ್, ಒಂದನೇ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾ ಅಣ್ಣಯ್ಯನವರ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಅರುಣ್‌ಕುಮಾರ್ ಎಲ್.ಎಚ್, ನಗರ ಘಟಕದ ಎಲ್ಲಾ ನ್ಯಾಯಾಧೀಶರು, ನ್ಯಾಯಾಲಯಗಳ ಸಿಬ್ಬಂದಿ ಮತ್ತು ಮಹಾನಗರ ಪಾಲಿಕೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಭಾಗವಹಿಸಿದ್ದರು.

ಪ್ರಮುಖ ಸುದ್ದಿ

# ಅಹಿಂಸಾದಿಂದಲೇ ಸ್ವಾತಂತ್ರ್ಯ ತಂದ ಸಿದ್ಧಾಂತ ಪ್ರಪಂಚಕ್ಕೆ ಮಾದರಿ

» **ದಾವಣಗೆರೆ**

ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ತಮ್ಮ ಸರಳತೆಯಿಂದಲೇ ಇತರರಿಗೆ ಮೇಲ್ಪಂಕ್ತಿಯಾಗಿದ್ದು ಶಾಂತಿ ಮತ್ತು ಅಂಹಿಸಾ ಮಂತ್ರದಿಂದಲೇ ದೇಶಕ್ಕೆ ಸ್ವಾತಂತ್ರ್ಯ ದೊರಕಿಸಿಕೊಟ್ಟರು. ಅವರ ಈ ನಡೆ ಇಡೀ ಪ್ರಪಂಚಕ್ಕೆ ಮಾದರಿಯಾಗಿದೆ ಎಂದು ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ ತಿಳಿಸಿದರು.

ಅವರುಜಿಲ್ಲಾಡಳಿತ,ಜಿಲ್ಲಾಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ರಾಮನಗರದಲ್ಲಿನ ಗಾಂಧಿಭವನದಲ್ಲಿ ಏರ್ಪಡಿಸಲಾದ ಸ್ವಚ್ಛತಾ ನಡಿಗೆ ಹಾಗೂ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 155 ನೇ ಜನ್ಮ ದಿನಾಚರಣೆ ಹಾಗೂ ಲಾಲ್ ಬಹುದ್ದೂರ್ ಶಾಸ್ತ್ರೀಜಿಯವರ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಭಾರತವಲ್ಲದೇ ಹೊರದೇಶಗಳಲ್ಲಿ ಗಾಂಧೀಜಿಯವರ ಶಾಂತಿ ಮತ್ತು ಅಹಿಂಸಾ ತತ್ವಗಳನ್ನೇ ಅನುಸರಿಸಿದರು. ಜಾಗತಿಕವಾಗಿ ಗಾಂಧಿ ತತ್ವಾದರ್ಶಗಳು ಇಂದಿಗೂ ಪ್ರಸ್ತುತವೆನಿಸಿದ್ದು ಇಂತಹ ಮಹಾನ್ ವ್ಯಕ್ತಿಯ ಜಯಂತಿ ಆಚರಿಸುತ್ತಿರುವ ನಾವುಗಳು ಮಾನವೀಯ ಹೃದಯಗಳನ್ನು ಹೊಂದಿದಾಗ ಮಾತ್ರ ಇಂತಹ ಕಾರ್ಯಕ್ರಮಗಳಿಗೆ ಅರ್ಥ ಬರುತ್ತದೆ ಎಂದರು.

ಗಾಂಧಿಜೀಯವರ ಸರಳತೆ, ಸ್ವಚ್ಛತೆ, ಭಾವನಾತ್ಮಕ ಸಂದೇಶಗಳನ್ನು ನಾವೇಲ್ಲರೂ ಅಳವಡಿಸಿಕೊಳ್ಳಬೇಕು. ಸ್ವಚ್ಛತೆ ಎನ್ನುವ ಕೆಲಸ ಮೊದಲು ನಮ್ಮ ಮನೆ, ಸುತ್ತಮುತ್ತಲಿನ ವಾತಾವರಣದಿಂದ ಆರಂಭ ಆಗಬೇಕಿದೆ. ಎಲ್ಲಿಯವರೆಗೆ ಮಾನವ ಧರ್ಮ ಇರುತ್ತದೆಯೋ ಅಲ್ಲಿಯವರೆಗೆ ಗಾಂಧಿಜೀಯವರ ತತ್ವ ಆದರ್ಶಗಳು ಇರಲಿವೆ. ಎಲ್ಲಾ ಧರ್ಮಗಳ ಸಾರವೇ ಶಾಂತಿ ಮತ್ತು ಅಹಿಂಸೆ, ಇದನ್ನು ಎಲ್ಲರೂ ಅರಿತುಕೊಳ್ಳಬೇಕೆಂದು ಕಿವಿಮಾತು ಹೇಳಿದರು.

ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಜಯಂತಿ ಅಂಗವಾಗಿ ಏರ್ಪಡಿಸಲಾದ ರಾಷ್ಟ್ರಧ್ವಜಾರೋಹಣ ನೆರವೇರಿಸಿ, ಸ್ವಚ್ಛತಾ ನಡಿಗೆ ಹಾಗೂ ವೇದಿಕೆ ಕಾರ್ಯಕ್ರಮದಲ್ಲಿ ಮಹಾನಿಯರ ಭಾವಚಿತ್ರಗಳಿಗೆ ಪುಷ್ಪನಮನ ಸಲ್ಲಿಸಿ ಚರಕ ನೂಲುವ ಮೂಲಕ ಸರ್ವಧರ್ಮ ಪ್ರಾರ್ಥನೆ, ಭಜನ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ ಕಲ್ಪನೆಯಂತೆ ದೇಶವನ್ನು ಸುಶಿಕ್ಷಿತ, ಸುಸಂಸ್ಕೃತ ದೇಶವನ್ನಾಗಿಸಲು ಗಾಂಧಿಜೀಯವರ ತತ್ವ, ಆದರ್ಶ, ಸರಳತೆಯನ್ನು ನಾವೆಲ್ಲರೂ ಮೈಗೂಡಿಸಿಕೊಳ್ಳಬೇಕೆಂದುಕರೆನೀಡಿದರು. ಸ್ವಚ್ಛ ಭಾರತ ಗಾಂಧಿಜೀಯವರ ಕನಸಾಗಿತ್ತು. ಸ್ವಚ್ಛತೆಗೆ ಆದ್ಯತೆ ನೀಡುತ್ತಿದ್ದ ಅವರ ಸರಳತೆ, ಸಜ್ಜನಿಕೆ ಕೇವಲ ಭಾರತಕ್ಕೆ ಮಾತ್ರವಲ್ಲದೇ ಇತರೆ ದೇಶಗಳಿಗೆ ಅನುಕರಣೀಯವಾಗಿತ್ತು. ಕೇವಲ ಶಾಂತಿ ಮತ್ತು ಅಹಿಂಸೆಯಿಂದ ದೇಶಕ್ಕೆ ಸ್ವಾತಂತ್ರ್ಯ ತಂದು ಕೊಟ್ಟ ಮಹಾನ್ ಚೇತನ ಅವರು ಎಂದು ಬಣ್ಣಿಸಿದರು.

ಗಾಂಧಿ ಭವನದಲ್ಲಿ ನಿರಂತರವಾಗಿ ಚಟುವಟಿಕೆ ನಡೆಯಲು ಈಗಾಗಲೇ ವಿವಿಧ 12 ಇಲಾಖೆಗಳಿಂದ ಕಾರ್ಯಕ್ರಮ ಆಯೋಜಿಸಲು ಮತ್ತು ಸರ್ಕಾರದಿಂದ ಆಚರಿಸಲಾಗುವ ಬಹುತೇಕ ಜಯಂತಿಗಳನ್ನು ಇಲ್ಲಿಯೇ ಆಚರಣೆ ಮಾಡಲು ಆದೇಶಿಸಲಾಗಿದೆ. ಮುಂದಿನ ದಿನಗಳಲ್ಲಿ ಸ್ವ ಸಹಾಯ ಸಂಘದಿಂದ ತಯಾರಿಸುವ ವಿವಿಧ ವಸ್ತುಗಳ ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಆಯೋಜಿಸಲು ಉದ್ದೇಶಿಸಲಾಗಿದ್ದು ಗಾಂಧಿ ಭವನ ನಿರ್ವಹಣೆಗಾಗಿ ಜಿಲ್ಲಾ ಉಸ್ತುವಾರಿ ಸಚಿವರು ಸೇರಿದಂತೆ ಶಾಸಕರ ಸಹಯೋಗದೊಂದಿಗೆ ನಿರ್ವಹಣಾ ಸಮಿತಿ ರಚನೆ ಮಾಡಿ ಗಾಂಧಿ ಚಟುವಟಿಕೆಗಳಿಗೆ ಇನ್ನಷ್ಟು ಮಹತ್ವ ಕಲ್ಪಿಸಲಾಗುತ್ತದೆ ಎಂದರು.

ಮಹಾನಗರ ಪಾಲಿಕೆಯ ಮಹಾಪೌರರಾದ ಕೆ.ಚಮನ್ ಸಾಬ್ ಮಾತನಾಡಿ, ಹಿಂದು, ಇಸ್ಲಾಂ ಮತ್ತು ಕ್ರೈಸ್ತ ಧರ್ಮಗಳು ಶಾಂತಿ ಮತ್ತು ಅಹಿಂಸೆಯನ್ನೇ ಬೋಧಿಸಿವೆ. ಎಲ್ಲಾ ಧರ್ಮಗಳ ದೇವರುಗಳು ಹೇಳುವ ಸಾರವೇ ಇನ್ನೊಂದು ಧರ್ಮವನ್ನು ದ್ವೇಷಿಸದೇ ಪ್ರೀತಿ ವಿಶ್ವಾಸದಿಂದ ಕಾಣಬೇಕೆನ್ನುವುದಿದೆ. ಆದರೆ, ಇಂದಿನ ದಿನಮಾನಗಳಲ್ಲಿ ಯುವಕರು ಧರ್ಮ, ದೇವರ ಕಲ್ಪನೆಗಳನ್ನು ತಪ್ಪಾಗಿ ಅರ್ಥೈಸಿಕೊಂಡು ಸಂಘರ್ಷದ ಹಾದಿ ತುಳಿಯುತ್ತಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ನಾವು ಶಾಂತಿ ಮತ್ತು ಅಹಿಂಸೆ ಪಾಲಿಸದಿದ್ದರೆ ದೇಶಕ್ಕೆ ಗಂಡಾಂತರ ಎದುರಾಗಲಿದೆ ಎಂದು ಅಸಮಾಧಾನ ವ್ಯಕ್ತ ಪಡಿಸಿದರು.

ದಾವಣಗೆರೆ ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ದಿನೇಶ್ ಕೆ.ಶೆಟ್ಟಿ ಮಾತನಾಡಿ, ಸದಾ ಶಾಂತಿ ಮತ್ತು ಅಹಿಂಸೆಯನ್ನು ಪಾಲನೆ ಮಾಡುತ್ತಿದ್ದ ಗಾಂಧೀಜಿ ಇತರೆ ಚಳುವಳಿಗಳ ಮೂಲಕ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟರು. ವೈಯಕ್ತಿಕ ಲಾಭಕ್ಕಾಗಿ ಅವರು ಎಂದು ಚಳವಳಿ ಮಾಡಲಿಲ್ಲ ಎಂದು ಹೇಳಿದರು.

ಗಾಂಧಿ ಜಯಂತಿ ಅಂಗವಾಗಿ ಪ್ರತ್ಯೇಕ ವಿಭಾಗಗಳಲ್ಲಿ ವಿದ್ಯಾರ್ಥಿಗಳಿಗೆ ಏರ್ಪಡಿಸಲಾದ ಬಾಪೂಜಿ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಪ್ರಥಮ ಬಹುಮಾನ ರೂ.3000, ದ್ವಿತೀಯ ರೂ.2000 ಹಾಗೂ ತೃತೀಯ ಬಹುಮಾನ ರೂ.1000 ನಗದು ಹಾಗೂ ಪ್ರಶಸ್ತಿಪತ್ರ ವಿತರಣೆ ಮಾಡಲಾಯಿತು.



## ಫಾಸ್ಟ್ ನ್ಯೂಸ್

### ಮನೆ ಹಸ್ತಾಂತರ



» ಹೊಸದುರ್ಗ

ಬುದ್ದಿ ಮಾಂದ್ಯರು ಆಗಿರುವ ಈ ಕುಟುಂಬಕ್ಕೆ ಧರ್ಮಸ್ಥಳ ವಿರೇಂದ್ರ ಹೆಗ್ಗಡೆಯವರು ವಾತ್ಸಲ್ಯ ಮನೆ ನಿರ್ಮಾಣ ಮಾಡಿ ರಾಜ್ಯದ್ಯಾಂತ ಮಾದರಿಯಾಗಿದ್ದಾರೆ.ಇಂತಹಕಾರ್ಯಕ್ರಮಗಳನ್ನು ಸರ್ಕಾರ ಮಾಡಿದಾಗ ನಿರ್ಗತಿಕರು ನೆಮ್ಮದಿಯಿಂದ ಬದುಕಬಹುದಾಗಿದೆ ಎಂದು ಸಮಾಜ ಸೇವಕ ಹೆಗ್ಗೆರೆ ಶಂಕರಪ್ಪ ಶ್ಲಾಘನೀಯ ವ್ಯಕ್ತಪಡಿಸಿದರು. ತಾಲೂಕಿನ ಮತ್ತೋಡು ಹೋಬಳಿಯ ಹಾಗಲಕೆರೆ ಗ್ರಾಮದ ರಾಜಮ್ಮ ಕೋ ದಿ॥ ತಿಮ್ಮಬೋವಿ ರವರ ಕುಟುಂಬಕ್ಕೆ ಧರ್ಮಸ್ಥಳ ಯೋಜನೆಯಿಂದ ಮನೆ ನಿರ್ಮಾಣ ಮಾಡಿ ಹಸ್ತಾಂತರ ಮಾಡುವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಅಂಧರಾದ ರಾಜಮ್ಮ ಇವರ ಗಂಡ ತಿಮ್ಮಬೋವಿ ಕೆಲವು ವರ್ಷಗಳ ಹಿಂದೆ ಮರಣ ಹೊಂದಿದ್ದು ಬುದ್ದಿ ಮಾಂದ್ಯ ಮಗ ಆಶೋಕ, ಬುದ್ದಿ ಮಾಂದ್ಯ ಅದ ಇವರ ಅಣ್ಣ ಅಂಜಿನಪ್ಪ ಈ ಮನೆಯಲ್ಲಿ ವಾಸವಿದ್ದರು, ಇತ್ತೀಚೆಗೆ ಇವರ ತಾಯಿ ಕರಿಯಮ್ಮ ಮರಣ ಹೊಂದಿದ್ದು ಮನೆಯಲ್ಲಿ ಅತೀವ ಕಷ್ಟ ಪಡುತ್ತಿರುವಾಗ ಇವರ ಮನೆಗೆ ತಿಂಗಳಿಗೆ 1000 ಮಾಶಾಸನ ಜೊತೆಗೆ ವ್ಯವಸ್ಥಿತ ಮನೆ ಕಟ್ಟಿಕೊಟ್ಟಿರುವುದು ಧರ್ಮಸ್ಥಳದ ಧರ್ಮದ ಕೆಲಸ ಎಂದರು.ಸಂಸ್ಥೆಯ ಪ್ರಾದೇಶಿಕ ನಿರ್ದೇಶಕಿ ಶ್ರೀಮತಿ ಗೀತಾ.ಬಿ ಮಾತನಾಡಿ ಅಸಹಾಯಕರು ಯಾವತ್ತೂ ಯಾರಿಲ್ಲ ಎಂದು ಕೊರಗಬಾರದು ಅಸಹಾಯಕರ ಸಹಾಯಕ್ಕೆ ಧರ್ಮಸ್ಥಳ ಸಂಸ್ಥೆಯ ಕಾರ್ಯಕರ್ತರು ಸದಾ ಸೇವೆ ಮಾಡಲು ಸನ್ನದ್ದರಾಗಿರುತ್ತಾರೆ ಎಂದರು. ಕಾರ್ಯಕ್ರಮದಲ್ಲಿ ಸಮಾಜ ಸೇವಕ ಅರುಣ್ ಗೋವಿಂದಪ್ಪ ಕ್ಷೇತ್ರ ಯೋಜನಾಧಿಕಾರಿ ಶಿವಣ್ಣ.ಎಸ್, ರೈತ ಸಂಘದ ಅಧ್ಯಕ್ಷರು ಬೋರೇಶ್, ಗ್ರಾಮ ಪಂಚಾಯಿತಿ ಅಧ್ಯಕ್ಷ ಸುಜಾತ ಹಾಗೂ ಲೀಲಾ,ಶಿಲ್ಪ,ಹೇಮಾಲತಾ, ಲತಾ, ಯಶೋಧ ಹಾಜರಿದ್ದರು.

### ಗೌರಸಮುದ್ರ ಮಾರಮ್ಮ ಮರಿಪರಿಷೆ ಯಶಸ್ವಿ: 5.97 ಲಕ್ಷ ಹಣ ಸಂಗ್ರಹ.



» ಚಳ್ಳಕೆರೆ

ತಾಲ್ಲೂಕಿನ ತಳಕು ಹೋಬಳಿಯ ಗೌರಸಮುದ್ರ ಶ್ರೀಮಾರಮ್ಮದೇವಿ ಜಾತ್ರೆ ಮರಿಪರಿಷೆ ಅ.01ರ ಮಂಗಳವಾರ ಸಾವಿರಾರು ಭಕ್ತರ ಸಮಕ್ಷಮದಲ್ಲಿ ಯಶಸ್ವಿಯಾಗಿ ನಡೆಯಿತು. ರಾಜ್ಯದ ವಿವಿಧ ಭಾಗಗಳಿಂದ ದೇವಿಯ ಭಕ್ತರು ಆಗಮಿಸಿ ದರ್ಶನ ಪಡೆದರು. ತುಮುಲು ಪ್ರದೇಶದಲ್ಲೂ ಭಕ್ತರು ತಮ್ಮ ಇಷ್ಟದೇವರಾದ ಮಾರಮ್ಮದೇವಿಯನ್ನು ಪೂಜಿಸಿ ತಮ್ಮ ಹರಿಕೆಗಳನ್ನು ದೇವಿಗೆ ಅರ್ಪಿಸಿದರು. ದೇವಸ್ಥಾನದ ಆಡಳಿತ ಮಂಡಳಿ, ತಾಲ್ಲೂಕು ಆಡಳಿತ ಹಾಗೂ ಗ್ರಾಮಪಂಚಾಯಿತಿ ವತಿಯಿಂದ ಆಗಮಿಸಿದ ಭಕ್ತರಿಗೆ ಎಲ್ಲಾ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿತ್ತು. ಇದೇ ಸಂದರ್ಭದಲ್ಲಿ ಮರಿಪರಿಷೆ ಸಂದರ್ಭದಲ್ಲಿ ಭಕ್ತರು ದೇವಿಗೆ ಅರ್ಪಿಸಿದ ಕಾಣಿಕೆಯನ್ನು ಏಣಿಕೆ ಮಾಡಲಾಯಿತು. ಒಟ್ಟು 5,97.546 ಹಣ ಹುಂಡಿಯಲ್ಲಿ ಸಂಗ್ರಹವಾಗಿತ್ತು. ತಾಲ್ಲೂಕು ಕಚೇರಿಯ ಮುಜುರಾಯಿ ಸಿಬ್ಬಂದಿ, ಕಂದಾಯ ಇಲಾಖೆ ಸಿಬ್ಬಂದಿ ದೇವಸ್ಥಾನದ ಆಡಳಿತ ಮಂಡಳಿ ಸದಸ್ಯರು ಏಣಿಕೆ ಕಾರ್ಯದಲ್ಲಿ ಭಾಗವಹಿಸಿದ್ದರು. ತಹಶೀಲ್ದಾರ್ ರೇಹಾನ್‌ಪಾಷ,ಗ್ರಾಮ ಪಂಚಾಯಿತಿ ಅಧ್ಯಕ್ಷ ಓಬಣ್ಣ, ಕಂದಾಯಾಧಿಕಾರಿ ಲಿಂಗೇಗೌಡ ಮುಂತಾದವರು ಇದ್ದರು.

### ವಾಲ್ಮೀಕಿ ಜಯಂತಿ ಪೂರ್ವಭಾವಿ ಸಭೆ ಇಂದು.

» ಚಳ್ಳಕೆರೆ

ಪ್ರತಿವರ್ಷದಂತೆ ಈ ವರ್ಷವೂ ಮಹರ್ಷಿ ವಾಲ್ಮೀಕಿ ಜಯಂತಿ ಕಾರ್ಯಕ್ರಮವನ್ನು ಅ.17ರ ಗುರುವಾರ ಆಚರಿಸಲಿದ್ದು, ಕಾರ್ಯಕ್ರಮದ ಯಶಸ್ವಿ ಬಗ್ಗೆ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಅಧ್ಯಕ್ಷತೆಯಲ್ಲಿ ಅ.3ರ ಗುರುವಾರ ಬೆಳಗ್ಗೆ 10.30ಕ್ಕೆ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಆಯೋಜಿಸಿದೆ ಎಂದು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಅಧ್ಯಕ್ಷ, ತಹಶೀಲ್ದಾರ್ ರೇಹಾನ್‌ಪಾಷ ತಿಳಿಸಿದ್ದಾರೆ. ಅವರು, ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿ ಪೂರ್ವಭಾವಿ ಸಭೆಯಲ್ಲಿ ವಾಲ್ಮೀಕಿ ಸಮುದಾಯದ ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಮುಖಂಡರು, ಸಮಾಜದ, ಸಮುದಾಯದ ಚುನಾಯಿತ ಪ್ರತಿನಿಧಿಗಳು, ನಗರಸಭೆ ಸದಸ್ಯರು, ನಾಮಿನಿ ಸದಸ್ಯರು, ಕೆಡಿಪಿ ಸದಸ್ಯರು ಸಭೆಗೆ ಆಗಮಿಸಿ ಸಲಹೆ ಸೂಚನೆ ನೀಡಲು ಮನವಿ ಮಾಡಲಾಗಿದೆ.

## ಕೇಂದ್ರ ಸಚಿವ ವಿ.ಸೋಮಣ್ಣ ಆಶ್ವಾಸನೆ

# ನೇರ ರೈಲ್ವೆ: 2027ರೊಳಗೆ ಲೋಕಾರ್ಪಣೆ

» ಚಿತ್ರದುರ್ಗ

ದಾವಣಗೆರೆ–ಚಿತ್ರದುರ್ಗ–ತುಮಕೂರು ನೇರ ರೈಲ್ವೆ ಮಾರ್ಗ ಯೋಜನೆ ಹಾಗೂ ಪಾವಗಡ–ರಾಯದುರ್ಗ ನೂತನ ರೈಲ್ವೆ ಮಾರ್ಗ ಯೋಜನೆ 2027ರ ಜನವರಿಯೊಳಗೆ ಲೋಕಾರ್ಪಣೆಗೊಳ್ಳಲಿದೆ ಎಂದು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ಆಶ್ವಾಸನೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ತುಮಕೂರು–ಚಿತ್ರದುರ್ಗ–ದಾವಣಗೆರೆ ಹಾಗೂ ರಾಯದುರ್ಗ–ಪಾವಗಡ ನೂತನ ರೈಲ್ವೆ ಮಾರ್ಗಗಳ ಭೂಸ್ವಾಧೀನ ಪ್ರಕ್ರಿಯೆ ಕುರಿತು ಅಧಿಕಾರಿಗಳೊಂದಿಗೆ ಸಭೆ ನಡೆಸಿ ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು.

ರೂ.2140 ಕೋಟಿ ವೆಚ್ಚದಲ್ಲಿ ನೂತನ ರೈಲ್ವೆ ಮಾರ್ಗಗಳ ನಿರ್ಮಾಣ ಕಾರ್ಯಕ್ಕೆ ಯೋಜನೆ ರೂಪಿಸಲಾಗಿದೆ. ಈ ಮೊದಲು ರಾಜ್ಯ ಹಾಗೂ ಕೇಂದ್ರ ಸರ್ಕಾರ ಶೇ.50–50ರ ಅನುಪಾತದಲ್ಲಿ ಯೋಜನೆ ಜಾರಿಗೊಳಿಸುವ ತೀರ್ಮಾನಿಸಲಾಗಿತ್ತು. ಇದನ್ನು ಬದಲಿಸಿ ರಾಜ್ಯ ಸರ್ಕಾರ ಭೂ ಸ್ವಾಧೀನ ವೆಚ್ಚವನ್ನು ಭರಿಸಿ, ಯೋಜನೆಗೆ ಭೂಮಿ ಹಸ್ತಾಂತರಿಸಿದರೆ ರೈಲ್ವೆ ಇಲಾಖೆಯಿಂದಲೇ ಯೋಜನೆಯನ್ನು ಸಂಪೂರ್ಣವಾಗಿ ಅನುಷ್ಠಾನಗೊಳಿಸಲಾಗುವುದು. ಎರಡು ನೂತನ ರೈಲ್ವೆ ಮಾರ್ಗಗಳಿಗೆ 2409 ಎಕರೆ ಭೂಮಿ ಅವಶ್ಯಕತೆ ಇದ್ದು, ಇದರಲ್ಲಿ ಕೇವಲ 280 ಎಕರೆ ಭೂಸ್ವಾಧೀನ ಪ್ರಕ್ರಿಯೆ ಬಾಕಿ ಇದೆ. ರೈಲ್ವೆ ಮಾರ್ಗಕ್ಕೆ ಈಗಾಗಲೆ 1100 ಕೋಟಿ ರೂ. ಅನುದಾನ ಒದಗಿಸಲಾಗಿದೆ. ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡ ನಂತರ ಪ್ರಧಾನಮಂತ್ರಿಗಳ ಸೂಚನೆಯಂತೆ 2027ರ ಜನವರಿ ವೇಳೆಗೆ ನೂತನ ರೈಲ್ವೆ ಮಾರ್ಗಗಳ ನಿರ್ಮಾಣ ಮಾಡಿ ಪ್ರಧಾನಮಂತ್ರಿ ಹಾಗೂ ರೈಲ್ವೆ ಖಾತೆ ಸಚಿವರಿಂದ ಲೋಕಾರ್ಪಣೆ ಮಾಡುವುದಾಗಿ ಸಚಿವ ವಿ.ಸೋಮಣ್ಣ ತಿಳಿಸಿದರು.



ರೈಲ್ವೆ ಇಲಾಖೆಯಲ್ಲಿ ಸಾಕಷ್ಟು ಕ್ರಾಂತಿಕಾರಕ ಬದಲಾವಣೆಗಳನ್ನು ತರಲಾಗಿದೆ. ಪ್ರಯಾಣಿಕರ ಸುರಕ್ಷತೆ ಹಿತದೃಷ್ಟಿಯಿಂದ ಹಾಗೂ ರೈಲ್ವೆ ಅಪಘಾತಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ "ಕವಚ್" ರಕ್ಷಣಾ ವ್ಯವಸ್ಥೆಯನ್ನು ಪ್ರತಿ ರೈಲಿನಲ್ಲಿಯೂ ಅಳವಡಿಸಲು ಚಿಂತನೆ ನಡೆಸಲಾಗಿದೆ. ಕವಚ್ ವ್ಯವಸ್ಥೆಯು ವಿಮಾನದ ಬ್ಲಾಕ್‌ಬಾಕ್ಸ್ ಮಾದರಿಯಲ್ಲಿ ರೈಲಿನ ಎಲ್ಲ ಚಲನವಲನಗಳನ್ನು ಸಂಗ್ರಹಿಸಲಿದೆ. ಇದರಿಂದ ಅಪಘಾತಗಳು ಉಂಟಾದ ಸಂದರ್ಭದಲ್ಲಿ ತಾಂತ್ರಿಕ ಲೋಪದೋಷಗಳನ್ನು ಪತ್ತೆಹಚ್ಚಲು ಸಹಕಾರಿಯಾಗಲಿದೆ. ದೇಶದ 24 ರಾಜ್ಯಗಳ 303 ಜಿಲ್ಲೆಗಳಲ್ಲಿ 103 ವಂದೇ ಭಾರತ್ ರೈಲುಗಳು ಸಂಚರಿಸುತ್ತಿವೆ. ರಾಜ್ಯದಲ್ಲಿ 10 ವಂದೇ ಭಾರತ್ ಕಾರ್ಯಾಚರಣೆ ನಡೆಸುತ್ತಿವೆ. ಕೇವಲ ಮೂರು ವರ್ಷಗಳಲ್ಲಿ ಈ ಸಾಧನೆ ಮಾಡಲಾಗಿದೆ. ರೈಲು ಸಂಚಾರದ ವೇಗ ಹೆಚ್ಚಳಕ್ಕೆ ಕ್ರಮಕೈಗೊಂಡಿದ್ದು, ಗಂಟೆಗೆ ಗರಿಷ್ಟ 160 ಕಿ.ಮೀ ವೇಗದ ಮಿತಿಯನ್ನು ತಲುಪಲು ಪ್ರಯತ್ನಿಸಲಾಗುತ್ತಿದೆ. ಕಳೆದ 10 ವರ್ಷಗಳಲ್ಲಿ ದೇಶಾದ್ಯಂತ 49 ಸಾವಿರ ಕಿ.ಮೀ ಉದ್ದದ ರೈಲ್ವೆ ಹಳಿ ಡಬ್ಲಿಂಗ್ ಕಾರ್ಯ ಮಾಡಲಾಗಿದೆ. ಶೇ.27 ರಷ್ಟು ಇದ್ದ ರೈಲ್ವೆ ಮಾರ್ಗಗಳ ವಿದ್ಯುದೀಕರಣವನ್ನು ಶೇ.98ರಷ್ಟು ಪ್ರಗತಿ ಸಾಧಿಸಲಾಗಿದೆ. ದೇಶದ ಎಲ್ಲ ಜಿಲ್ಲಾ ಕೇಂದ್ರಗಳ ರೈಲ್ವೆ ನಿಲ್ದಾಣಗಳನ್ನು ಏರ್‌ಪೋರ್ಟ್‌ಗಳ ಮಾದರಿಯಲ್ಲಿ ನವೀಕರಣಗೊಳಿಸಲಾಗುತ್ತಿದೆ. ಕೇರಳ, ಕರ್ನಾಟಕ, ಗೋವಾ ಹಾಗೂ ಮಹಾರಾಷ್ಟ್ರ ರಾಜ್ಯಗಳಲ್ಲಿ ಹಾದುಹೋಗಿರುವ 741 ಕಿ.ಮೀ ಉದ್ದದ ಕೊಂಕಣ ರೈಲ್ವೆಯನ್ನು ರೈಲ್ವೆ ಇಲಾಖೆಯ ನೇರ ಆಡಳಿತಕ್ಕೆ ಒಳಪಡಿಸಿ, ಹಳಿಗಳ ಡಬ್ಲಿಂಗ್ ಮಾಡುವ ಕಾರ್ಯಕ್ಕೆ ರೈಲ್ವೆ ಖಾತೆ ಸಚಿವ ಅಶ್ವಿನ್ ವೈಷ್ಣವ್ ಒಲವು ತೋರಿದಿದ್ದಾರೆ. ಉತ್ತರ ಪ್ರದೇಶದ ಪ್ರಯಾಗ್ ರಾಜ್‌ನಲ್ಲಿ ಬರುವ ಜನವರಿಯಲ್ಲಿ ಕುಂಭಮೇಳ ಜರುಗಲಿದ್ದು, ಸುಮಾರು 40 ಕೋಟಿಗೂ ಅಧಿಕ ಜನರು ಪಾಲ್ಗೊಳ್ಳುವ ನಿರೀಕ್ಷೆ ಇದೆ. ಈ ಹಿನ್ನಲೆಯಲ್ಲಿ ರೈಲ್ವೆ ಇಲಾಖೆಯಿಂದ 600 ವಿಶೇಷ ರೈಲುಗಳನ್ನು ವ್ಯವಸ್ಥೆ ಮಾಡಲಾಗುವುದು. ಪ್ರಯಾಗ್ ರಾಜ್‌ಗೆ ತೆರಳುವ ಭಕ್ತರಿಗೆ ಏಕರೂಪದ ಟಿಕೆಟ್ ವ್ಯವಸ್ಥೆ ಮಾಡುವ ಚಿಂತನೆ ನಡೆಸಲಾಗಿದ್ದು, ಟಿಕೆಟ್ ಪಡೆದವರು ಯಾವುದೇ ರೈಲಿನಲ್ಲಿ ಪ್ರಯಾಣಿಸಬಹುದಾಗಿದೆ ಎಂದರು.

ಅತೀ ಕಡಿಮೆ ಪ್ರಯಾಣದರದಲ್ಲಿ ಬಡವರು, ಸಣ್ಣ ಪುಟ್ಟ ವ್ಯಾಪಾರಿಗಳ ಅನುಕೂಲಕ್ಕಾಗಿ ಪ್ರಮುಖ ನಗರಗಳಿಗೆ ರೈಲು ಸಂಪರ್ಕ ಕಲ್ಪಿಸುವ ದೃಷ್ಠಿಯಿಂದ ಡೆಮೋ ರೈಲುಗಳನ್ನು ಓಡಿಸಲಾಗುತ್ತಿದೆ. ಸಂಚಾರ ದಟ್ಟಣೆ ಹೆಚ್ಚಿರುವ ಸಮಯದಲ್ಲಿ ಡೆಮೋ ರೈಲುಗಳನ್ನು ಓಡಿಸಲು ನಿರ್ಧಾರ ಕೈಗೊಳ್ಳಲಾಗಿದೆ. ರೈಲ್ವೆ ಇಲಾಖೆಯಲ್ಲಿ ಪಾರದರ್ಶಕತೆ ತರಲಾಗಿದ್ದು, 14 ಲಕ್ಷ ಕರ್ತವ್ಯ ನಿರತ ನೌಕರರಿಗೆ ಹಾಗೂ 15 ಲಕ್ಷ ನಿವೃತ್ತ ಪಿಂಚಣಿದಾರರಿಗೆ ನಿಗದಿತ ಸಮಯದಲ್ಲಿ ಎಲ್ಲ ಸೇವಾ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ರೈಲ್ವೆ ಇಲಾಖೆಯಿಂದ ನಿವೃತ್ತರಾಗುವ ನೌಕರರಿಗೆ ನಿವೃತ್ತ ದಿನದಂದೇ ಅವರಿಗೆ ಸಲ್ಲಬೇಕಾದ ಹಣಕಾಸು ಸೇರಿದಂತೆ ಎಲ್ಲ ರೀತಿಯ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ ಎಂದರು.

ಕೇಂದ್ರ ಜಲಶಕ್ತಿ ಸಚಿವಾಲಯದಿಂದ ಹರ್ ಘರ್ ಜಲ್ ಯೋಜನೆಯಡಿ 8 ಲಕ್ಷ ಕೋಟಿ ವೆಚ್ಚದಲ್ಲಿ ಪ್ರತಿ ಮನೆ ಮನೆಗೂ ಶುದ್ಧ ಕುಡಿಯುವ ನೀರಿನ ನಳ ಸಂಪರ್ಕ ಕಲ್ಪಿಸಲಾಗುತ್ತಿದೆ ಎಂದು ಸಚಿವ ಸೋಮಣ್ಣ ತಿಳಿಸಿದರು.

**ರೈಲ್ವೆ ಮೇಲ್ಸೇತುವೆ ನಿರ್ಮಾಣಕ್ಕೆ ಆದ್ಯತೆ:** ಪ್ರಸ್ತುತ ನೂತನ ರೈಲ್ವೆ ಮಾರ್ಗಗಳನ್ನು ನಿರ್ಮಾಣ ಮಾಡುವ ವೇಳೆ ರೈಲ್ವೆ ಕೆಳ ಸೇತುವೆ ನಿರ್ಮಾಣದ ಬದಲಿಗೆ ರೈಲ್ವೆ ಮೇಲ್ಸೇತುವೆ ನಿರ್ಮಾಣಕ್ಕೆ ಹೆಚ್ಚಿನ ಆದ್ಯತೆ ನೀಡುವಂತೆ ಸಚಿವ ವಿ.ಸೋಮಣ್ಣ ರೈಲ್ವೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಮಳೆ ನೀರು ಸಂಗ್ರಹಗೊಂಡು ಸಾರ್ವಜನಿಕರ ಸಂಚಾರಕ್ಕೆ ತೀವ್ರ ತೊಂದರೆ ಉಂಟಾಗುತ್ತಿರುವ ಚಿತ್ರದುರ್ಗ ಹಾಗೂ ತುಮಕೂರು ಜಿಲ್ಲೆಗಳಲ್ಲಿನ ರೈಲ್ವೆ ಕೆಳಸೇತುವೆ ದುರಸ್ತಿ ಕಾರ್ಯವನ್ನು ಸಂಸದ ಗೋವಿಂದ ಎಂ ಕಾರಜೋಳ ಅವರ ಸಲಹೆ ಪಡೆದು, ರೈಲ್ವೆ ಕೆಳ ಸೇತುವೆಗಳ ಸಮಸ್ಯೆ ಪರಿಹರಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

**156 ಎಕರೆ ಭೂಸ್ವಾಧೀನ ಪ್ರಕ್ರಿಯೆ ಬಾಕಿ:** ದಾವಣಗೆರೆ–ಚಿತ್ರದುರ್ಗ–ತುಮಕೂರು ನೇರ ರೈಲ್ವೆ ಮಾರ್ಗ ಯೋಜನೆಗೆ ಚಿತ್ರದುರ್ಗ ಜಿಲ್ಲೆಯಲ್ಲಿ 1211 ಎಕರೆ ಭೂ ಸ್ವಾಧೀನಕ್ಕೆ ರೈಲ್ವೆ ಇಲಾಖೆಯಿಂದ ಕೋರಲಾಗಿತ್ತು. ಇದುವರೆಗೆ 1026 ಎಕರೆ ಭೂಮಿಯನ್ನು ಸ್ವಾಧೀನ ಪಡಿಸಿಕೊಂಡು ರೈಲ್ವೆ ಇಲಾಖೆಗೆ ಹಸ್ತಾಂತರ ಮಾಡಲಾಗಿದೆ. ಭರಮಸಾಗರ–ಚಿತ್ರದುರ್ಗ, ಚಿತ್ರದುರ್ಗ–ಹಿರಿಯೂರು ಹಾಗೂ ಹಿರಿಯೂರು–ತಾವರಕೆರೆ ನಡುವೆ ಮೂರು ಹಂತದಲ್ಲಿ ಭೂಸ್ವಾಧೀನ ನಡೆಸಲಾಗುತ್ತಿದೆ. ಒಟ್ಟು 156 ಎಕರೆ ಭೂಸ್ವಾಧೀನದ ಅಂತಿಮ ಪ್ರಕ್ರಿಯೆ ಚಾಲ್ತಿಯಲ್ಲಿದೆ. ಶೇ.90ರಷ್ಟು ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡ ಹಂತಗಳಲ್ಲಿ ಈಗಾಗಲೇ ರೈಲ್ವೆ ಇಲಾಖೆಯಿಂದ ಕಾಮಗಾರಿಗಳನ್ನು ಆರಂಭಿಸಲಾಗಿದ್ದು, ಯಾವುದೇ ತೊಂದರೆ ಇಲ್ಲ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸಭೆಯಲ್ಲಿ ಮಾಹಿತಿ ನೀಡಿದರು.

**ಬೆಳೆ ಕಟಾವು ನಂತರ ಕಾಮಗಾರಿ ಆರಂಭಿಸಲು ಸೂಚನೆ:** ನೇರ ರೈಲ್ವೆ ಮಾರ್ಗ ಯೋಜನೆಯ ದಾವಣಗೆರೆ–ಭರಮಸಾಗರ–ಚಿತ್ರದುರ್ಗ ಮಧ್ಯದಲ್ಲಿ ಭೂಸ್ವಾಧೀನಪಡಿಸಿಕೊಂಡ ಜಮೀನಿನಲ್ಲಿ ರೈತರು ಬೆಳೆಗಳನ್ನು ಬೆಳೆದಿದ್ದಾರೆ. ರೈತರಿಗೆ ತೊಂದರೆಯಾಗದಂತೆ ಇನ್ನೂ 1 ತಿಂಗಳ ಬಳಿಕ ಬೆಳೆ ಕಟಾವು ನಂತರ ರೈಲ್ವೆ ಕಾಮಗಾರಿಗಳನ್ನು ಆರಂಭಿಸುವಂತೆ ಸಚಿವ ವಿ.ಸೋಮಣ್ಣ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಸಂಸದ ಗೋವಿಂದ ಎಂ ಕಾರಜೋಳ, ಶಾಸಕರಾದ ಎಂ.ಚಂದ್ರಪ್ಪ, ಟಿ.ರಘುಮೂರ್ತಿ, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ನೇರ ರೈಲ್ವೆ ಮಾರ್ಗ ಭೂಸ್ವಾಧೀನಾಧಿಕಾರಿ ವೆಂಕಟೇಶ್, ಬೆಂಗಳೂರು ಕಂಟೋನ್‌ಮೆಂಟ್ ನಿರ್ಮಾಣ ವಿಭಾಗದ ಮುಖ್ಯ ಆಡಳಿತಾಧಿಕಾರಿ ಸಂದೀಪ್ ಶರ್ಮಾ, ಮುಖ್ಯ ಇಂಜಿನಿಯರ್‌ಗಳಾದ ಪ್ರದೀಪ್ ಪುರಿ, ಸಂಜಯ್ ಬನ್ನಾರಿ, ವಿಭಾಗೀಯ ಇಂಜಿನಿಯರ್ ರಜತ್, ಮೈಸೂರು ರೈಲು ವಿಭಾಗದ ಮಂಡಲ ವಾಣಿಜ್ಯ ವ್ಯವಸ್ಥಾಪಕ ಗಿರೀಶ್ ಕಲಗೊಂಡ, ತಹಶೀಲ್ದಾರ್ ಡಾ.ನಾಗವೇಣಿ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

## ಗಾಂಧಿ ಜಯಂತಿ: ಚಂದ್ರವಳ್ಳಿ ರಸ್ತೆಯಲ್ಲಿ ಸ್ವಚ್ಛತಾ ಕಾರ್ಯ




» ಚಿತ್ರದುರ್ಗ

ಗಾಂಧೀ ಜಯಂತಿ ಅಂಗವಾಗಿ ನಗರದ ಚಂದ್ರವಳ್ಳಿ ರಸ್ತೆಯಲ್ಲಿ ಸ್ವಚ್ಛತಾ ಕಾರ್ಯ ಕೈಗೊಳ್ಳಲಾಯಿತು. ನೆಹರು ಯುವ ಕೇಂದ್ರ, ಡಾನ್ ಬಾಸ್ಕೋ ಪದವಿ ಕಾಲೇಜು ಎನ್.ಎಸ್.ಎಸ್ ಘಟಕ, ಹಂಸಗಾನ ಕಲಾ ಸಂಘ ಮತ್ತು ಅರೋಗ್ಯವೇ ಭಾಗ್ಯ ಸಂಘ ವತಿಯಿಂದ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಂಡು ಚಂದ್ರವಳ್ಳಿ ರಸ್ತೆಯಲ್ಲಿ ಅಲ್ಲಲ್ಲಿ ಬಿದ್ದಿರುವ ಕಸ ಮತ್ತು ಪ್ಲಾಸ್ಟಿಕ್ ಸಂಗ್ರಹಿಸುವ ಸ್ವಚ್ಛತಾ ಕಾರ್ಯದಲ್ಲಿ ವಿದ್ಯಾರ್ಥಿಗಳು ಮತ್ತು ಸ್ವಯಂಸೇವಕರು ಪಾಲ್ಗೊಂಡಿದ್ದರು.

ಯುವ ಜನ ಅಧಿಕಾರಿ ಸುಹಾಸ್ ಮಾತನಾಡಿ, ನೆಹರು ಯುವ ಕೇಂದ್ರ ವತಿಯಿಂದ ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಅಂಗವಾಗಿ ಸಾರ್ವಜನಿಕರಲ್ಲಿ ನೈರ್ಮಲ್ಯ, ಶುಚಿತ್ವ ಕುರಿತು ಕಳೆದ ಸೆಪ್ಟೆಂಬರ್ 17 ರಿಂದ ಪ್ರತಿ ದಿನ ಬೆಳಿಗ್ಗೆ ನಗರಸಭೆ ಮತ್ತು ಹಲವಾರು ಸಂಘ ಸಂಸ್ಥೆಗಳ ಸಹಯೋಗದಲ್ಲಿ ನಗರದ ಹಲವು ಕಡೆ ಸ್ವಚ್ಛತಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದ ಅವರು, ಪ್ಲಾಸ್ಟಿಕ್ ಮುಕ್ತ ಪರಿಸರ ನಿರ್ಮಾಣ ಮಾಡಲು ಯುವ ಜನತೆ ಸಹಕರಿಸಬೇಕು ಎಂದರು.

ಇದೇ ಸಂದರ್ಭದಲ್ಲಿ ಸ್ವಚ್ಛತಾ ಹಾಗೂ ಪ್ಲಾಸ್ಟಿಕ್‌ಮುಕ್ತ ಪ್ರತಿಜ್ಞಾ ವಿಧಿ ಬೋಧಿಸಲಾಯಿತು. ಕಾರ್ಯಕ್ರಮದಲ್ಲಿ ಡಾನ್ ಬಾಸ್ಕೋ ಪದವಿ ಕಾಲೇಜಿನ ಪ್ರಾಂಶುಪಾಲರಾದ ಬೆನ್ನಿ, ಉಪ ಪ್ರಾಂಶುಪಾಲರಾದ ಕ್ರಿಸ್ಟಿ ಜೋಸೆಫ್, ಎನ್‌ಎಸ್‌ಎಸ್ ಅಧಿಕಾರಿ ಡಾ.ಧನಕೋಟಿ, ಆರೋಗ್ಯ ಭಾಗ್ಯ ಸದಸ್ಯ ಸುರೇಂದ್ರ ಬಾಬು, ಭಾರತೀಯ ರೆಡ್ ಕ್ರಾಸ್ ಜಿಲ್ಲಾ ಸಂಘದ ಕಾರ್ಯದರ್ಶಿ ಮಜಹರ್ ಉಲ್ಲಾ, ಚಿತ್ರಡಾನ್ ಬಾಸ್ಕೋ ನಿರ್ದೇಶಕ ರಾಜು ಸೇರಿದಂತೆ ಸ್ವಯಂ ಸೇವಕರಾದ ಲೋಕೇಶ್, ಕಲ್ಲೇಶ್ ಮತ್ತಿತರರು ಇದ್ದರು.

## ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಮಹಾತ್ಮಗಾಂಧಿ ಜಯಂತಿ ಆಚರಣೆ



» ಚಿತ್ರದುರ್ಗ

ಚಿತ್ರದುರ್ಗ ನಗರದ ಕೆಳಗೋಟೆಯಲ್ಲಿನ ಭಾರತೀಯ ಜನತಾ ಪಾರ್ಟಿಯ ಕಚೇರಿಯಲ್ಲಿ ಇಂದು ಮಹಾತ್ಮಗಾಂಧಿಯವರ 155ನೇ ಹಾಗೂ ಮಾಜಿ ಪ್ರಧಾನ ಮಂತ್ರಿ ಲಾಲ್ ಬಹದ್ದೂರ್ ಶಾಸ್ತ್ರಿಯವರ 120ನೇ ಜನ್ಮ ದಿನಾಚರಣೆಯ ಅಂಗವಾಗಿ ಅವರ ಭಾವಚಿತ್ರಕ್ಕೆ ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್ ಪುಷ್ಪ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷರಾದ ಎ.ಮುರಳಿ, ಪ್ರಧಾನ ಕಾರ್ಯದರ್ಶಿಗಳಾದ ಸಂಪತ್ ಕುಮಾರ್ ರೈತ ಮೂರ್ಚಾದ ಪ್ರಧಾನ ಕಾರ್ಯದರ್ಶಿ ಮಲ್ಲಿಕಾರ್ಜನ್, ನಗರಾಭೀವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷರಾದ ಸುರೇಶ್ ಸಿದ್ದಾಪುರ, ಕಲ್ಲೇಶಯ್ಯ, ವಕ್ತಾರರಾದ ನಾಗರಾಜ್ ಬೇದ್ರೇ, ಶಿವಕುಮಾರ್, ನಾಗರಾಜ್ ಮಹಾಂತೇಶ್ ಸೇರಿದಂತೆ ಇತರರು ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

# ಸಿಎಂ ರಾಜೀನಾಮೆ: ಬಿಜೆಪಿ ನಾಯಕರ ತಿರುಕನ ಕನಸು

» ಚಿತ್ರದುರ್ಗ

ಸೈಟ್‌ಗಾಗಿ ಪತಿ ಮೇಲೆ ಆಪಾದನೆ ಬರಕೂಡದೆಂಬ ಧಾರಾಳ ಭಾವನೆಯಿಂದ ಸಿದ್ಧರಾಮಯ್ಯ ಪತ್ನಿ ಪಾರ್ವತಮ್ಮ ಸೈಟ್ ಹಿಂದುರಿಗಿಸಿದ್ದಾರೆ ಸಿಎಂ ಭಾವನೆಗೆ ಕಾಂಗ್ರೆಸ್ಸಿಗರು ಗೌರವ ನೀಡುತ್ತೇವೆ ಆಸ್ತಿ ನನಗೆ ದೊಡ್ಡದಲ್ಲ ಎಂದು ಸಿಎಂ ಪತ್ನಿ ಹೇಳಿದ್ದಾರೆ ಎಂದು ಯೋಜನೆ & ಸಾಂಖಿಕ ಸಚಿವ ಡಿ ಸುಧಾಕರ್ ಹೇಳಿದ್ದಾರೆ.

ಚಿತ್ರದುರ್ಗದಲ್ಲಿ ತಮ್ಮನ್ನು ಭೇಟಿಯಾದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯರವರಿಗೆ ಕೆಟ್ಟ ಮೇಲೆ ಬುದ್ದಿ ಬಂತು ಎಂಬ ಬಿ.ವೈ ವಿಜಯೇಂದ್ರರವರ ಹೇಳಿಕೆಗೆ ಪ್ರತಿಕ್ರಿಯಿಸಿ ಬಿಜೆಪಿಯವರು ಮೊಸರಲ್ಲಿ ಕಲ್ಲು ಹುಡುಕುವ ಕೆಲಸ ಮಾಡುತ್ತಾರೆ. ಅವರ ಅಧಿಕಾರಾವಧಿಯಲ್ಲಿ ಆಗಿದ್ದನ್ನು ಬಿಜೆಪಿಯವರು ಮರೆತಿದ್ದಾರೆ..ಅವರ ಅಧಿಕಾರದಲ್ಲಿ ಎಷ್ಟೋ ಕಡೆ ಲಂಚಾವತಾರ ತಾಂಡವ ಆಡಿತ್ತು ಎಂಧು ದೂರಿದರು. ತಪ್ಪು ಮಾಡದ ಸಿದ್ದರಾಮಯ್ಯರವರು ಸೈಟ್ ಯಾಕೆ ವಾಪಸ್ ಕೊಟ್ರು ವಿಚಾರಕ್ಕೆ



ಪ್ರತಿಕ್ರಿಯಿಸಿ ಆಪಾದನೆ ಬಂದ ಹಿನ್ನೆಲೆ ಸೈಟ್ ಹಿಂದಿರುಗಿಸಿದ್ದಾರೆ.. ಸೀತಾ ಮಾತೆಯನ್ನು ಯಾರದ್ದೋ ಮಾತು ಕೇಳಿ ವನವಾಸಕ್ಕೆ ಕಳಿಸಿದ್ರು. ಸತ್ಯವನ್ನು ಯಾವತ್ತೂ ಮರೆಮಾಚಲು ಆಗಲ್ಲ.. ಈಗ ಆಸ್ತಿ ಯಾವುದೂ ಬೇಡ ಅಂತಾ ಪಾರ್ವತಿಯವರೇ ಹೇಳಿದ್ದಾರೆ.. ಮೂಡಾ ಕೇಸಲ್ಲಿ ಸಿದ್ದರಾಮಯ್ಯಮವರಿಗೆ ಏನೇನೂ ಆಗಲ್ಲ..ಸತ್ಯ ಯಾವತ್ತೂ ಬಾಳುತ್ತೆ...ಸತ್ಯ ಅಸತ್ಯವನ್ನು ಹೊಡೆದು ಹಾಕುತ್ತೆ.. ಬಿಜೆಪಿಯವರು ದಿನಾಲೂ ಅಸತ್ಯ ಮಾತನಾಡ್ತಾರೆ...ಸತ್ಯ ಅದನ್ನೆಲ್ಲ ಹೊಡೆದು ಹಾಕುತ್ತೆ.ಸಿಎಂಗೆ ಚ್ಯುತಿ ಬರುತ್ತದೆಂಬ ಕಾರಣಕ್ಕೆ ಸೈಟ್ ಹಿಂದಿರುಗಿಸಿದ್ದಾರೆ ಸಿದ್ಧರಾಮಯ್ಯ ಪತ್ನಿ ಪಾರ್ವತಮ್ಮ ಸೈಟ್ ಹಿಂದುರಿಗಿಸಿದ್ದಾರೆ ಸಿಎಂ ಭಾವನೆಗೆ ಕಾಂಗ್ರೆಸ್ಸಿಗರು ಗೌರವ ನೀಡುತ್ತೇವೆ ಸೈಟ್ ವಾಪಸ್ ನೀಡಿದ್ದು ಅವರ ತ್ಯಾಗ ಮನೋಭಾವನೆ ತೋರಿಸುತ್ತೆ. ನ್ಯಾಯಯುತವಾಗಿದ್ದರೂ ಸಹ ಆಪಾದನೆ ಬಂದಿದೆ ಯಾರೋ ಮಾತಾಡಿದ್ದಕ್ಕೆ ಸೀತಾಮಾತೆಗೆ ವನವಾಸಕ್ಕೆ ಕಳಿಸಿದ್ದರು ಆಸ್ತಿ ನನಗೆ ದೊಡ್ಡದಲ್ಲ ಎಂದು ಸಿಎಂ ಪತ್ನಿ ಹೇಳಿದ್ದಾರೆ ಎಂದರು.

ಪ್ರಾಮಾಣಿಕ ಮುಖ್ಯಮಂತ್ರಿಗಳ ಮೇಲೆ ಸಾಕಷ್ಟು ಅಪವಾದಗಳು ಬರುವುದು ಸಹಜ, ಬಿಜೆಪಿಯವರು ಸಾಕಷ್ಟು ಹಗರಣಗಳನ್ನ ಮಾಡಿ ಎಷ್ಟು ಹಗರಣಗಳನ್ನು ಮುಚ್ಚಿ ಹಾಕಿದ್ದಾರೆ. ಮುಖ್ಯಮಂತ್ರಿಗಳು ಯಾವುದೇ ತಪ್ಪು ಮಾಡಿಲ್ಲ, ಸಿಎಂ ಪತ್ನಿ ತ್ಯಾಗ ಮನೋಭಾವನೆಯಿಂದ ತಮ್ಮ ನಿವೇಶನಗಳನ್ನು ವಾಪಸ್ ನೀಡಿ ಮುಖ್ಯಮಂತ್ರಿಗಳ ಸ್ಥಾನಕ್ಕೆ ಧಕ್ಕೆ ಬರಬಾರದೆಂಬ ನಿಟ್ಟಿನ ಕೆಲಸ ಮಾಡಿದ್ದಾರೆ. ಇನ್ನೂ ಬಿಜೆಪಿಯವರ ಅಧಿಕಾರದ ಅವಧಿಯಲ್ಲಿ ಸಾಕಷ್ಟು ಹಗರಣಗಳು ನಡೆದಿದೆ. ಹಿಂಸಾತ್ಮಕ ಮಾರ್ಗದಲ್ಲಿ ನಡೆದಿರುವವರು ಬಿಜೆಪಿಯವರು, ಅಹಿಂಸ ಮಾರ್ಗದಲ್ಲಿ ಕಾಂಗ್ರೆಸ್ ಪಕ್ಷ ನಡೆದಿದೆ ಡಿ ಸುಧಾಕರ್ ಹೇಳಿದ್ದಾರೆ.ಇಡಿ ಪ್ರಕರಣ ದಾಖಲಿಸಿದ್ದರಿಂದ ಏನೂ ಆಗಲ್ಲ ಅಸತ್ಯವನ್ನು ಸತ್ಯ ಹೊಡೆದು ಹಾಕುತ್ತದೆ ಬಿಜೆಪಿಯವರು ಅಸತ್ಯ ಮಾತಾಡುತ್ತಾರೆ, ಸತ್ಯ ಕಾಪಾಡುತ್ತದೆ ಬಿಜೆಪಿಗರು ಆಸ್ತಿ ಹೊಡೆದಿದ್ದಾರೆ, ಜೈಲಿಗೆ ಹೋಗಿದ್ದಾರೆ ಬಿಜೆಪಿಗರು ಎಂದಾದರು ಆಸ್ತಿ ವಾಪಸ್ ಕೊಟ್ಟರಾ ಎಂದು ಪ್ರಶ್ನೆದಸರಾ ಒಳಗೆ ಸಿಎಂ ರಾಜಿನಾಮೆ ನೀಡಿ, ಅರೆಸ್ಟ್ ಆಗುತ್ತಾರೆ ಎಂಬ ಬಿಜೆಪಿ ನಾಯಕರ ಹೇಳಿಕೆಗೆ ಪ್ರತಿಕ್ರಿಯಿಸಿ ಅದು ಬಿಜೆಪಿ ನಾಯಕರ ತಿರುಕನ ಕನಸು. ಮುಡಾದಲ್ಲಿ 4 ಸಾವಿರ ಸೈಟ್ ಅಕ್ರಮ ವರ್ಗಾವಣೆ ಕುರಿತು ಪ್ರತಿಕ್ರಿಯಿಸಿ ಸಂಪೂರ್ಣ ತನಿಖೆ ಆಗಲಿ. ಸತ್ಯ ಹೊರಬರಲಿ ಅಂತಾ ಪಾರ್ವತಮ್ಮ ಹೇಳಿದ್ದಾರೆ..ಎಲ್ಲವೂ ಹೊರಬರಲಿ ಅಂತಾ ರೈಟಿಂಗ್‌ನಲ್ಲಿ ಕೊಟ್ಟಿದ್ದಾರೆ.

ಕಾಂಗ್ರೆಸ್ ನಲ್ಲಿ ದಲಿತ, ಮೈನಾರಿಟಿ, ಜನರಲ್ ಎಲ್ಲಾ ಒಂದೇ.. ದಲಿತ ಸಿಎಂ ವಿಚಾರ ಸತ್ಯಕ್ಕೆ ದೂರವಾಗಿದ್ದು... ಹೈ ಕಮಾಂಡ್ ಈ ಕುರಿತು ನಿರ್ಧಾರ ತೆಗೆದುಕೊಳ್ಳುತ್ತೆ ಎಂದು ಸುಧಾಕರ್ ತಿಳಿಸಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T